# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

| ಸಂಪುಟ – 01 | ಸಂಚಿಕೆ – 41 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ : 17–08–2023 ಗುರುಧವಾರ | ಪುಟ: 4 | ಬೆಲೆ : ರೂ.2–00 |
|---|---|---|---|---|---|---|
| Volume - 01 | Issue - 41 | Title- Code: KARKAN 28269 | Chitradurga | Date : 17-08-2023 Thursday | Page: 4 | Price: Rs. 2-00 |



ಒಳ ಪುಟದ ಸುದ್ದಿಗಳು

2 ಜೀವನದ ಶಾಂತಿ ನೆಮ್ಮದಿಗೆ ಈಶ್ವರಿ ವಿಶ್ವವಿದ್ಯಾಲಯಕ್ಕೆ ಬನ್ನಿ

3 ವಿಶ್ವಮಾನವ ಶಾಲೆಯಲ್ಲಿ ಸಡಗರದ ಸ್ವಾತಂತ್ರ್ಯೋತ್ಸವ

4 ಮಡಿವಾಳ ಸಮಾಜಕ್ಕೆ ಎಸ್ಸಿ ಮೀಸಲಾತಿ ನೀಡಲು ರಾಜಕಾರಣಿ ಶ್ರಮಿಸಬೇಕು



ಸುದ್ದಿ ಹಾಗೂ ಜಾಹೀರಾತಿಗಾಗಿ ಸಂಪರ್ಕಿಸಿ :
nammajananews@gmail.com
ವಾಟ್ಸ್‌ಅಪ್ ನಂ. 9686622252


## ಫಾಸ್ಟ್ ನ್ಯೂಸ್

## ರೈತರು ಆತಂಕ ಪಡಬೇಡಿ : ಚನ್ನಗಿರಿ ಶಾಸಕರು



**ಚನ್ನಗಿರಿ** : ಆ.16: ಮಳೆಗಾಲದ ಹಂಗಾಮಿನ ಬೆಳೆ ಬೆಳೆಯಲು ಭದ್ರಾ ಬಲದಂಡೆ ಕಾಲುವೆಗೆ ಈಗಾಗಲೇ ಆಗಸ್ಟ್ 10 ರಿಂದಲೇ ನೀರು ಹರಿಸಲಾಗಿದೆ. ಭದ್ರಾ ನೀರಿನ ಮಟ್ಟ ಇಂದಿಗೆ 166.9 ಅಡಿ ನೀರಿ ಇದ್ದು, 170 ಅಡಿಗೆ ನೀರು ತಲುಪಿದರೆ ರೈತರಿಗೆ ಸಂಪೂರ್ಣವಾಗಿ ನೀರು ಹರಿಸಲು ಸಮಸ್ಯೆ ಆಗುವುದಿಲ್ಲ. ಪ್ರಸ್ತುತ ಜಲಾಶಯದಲ್ಲಿರುವ ನೀರು ರೈತರು ಬೆಳೆ ಬೆಳೆಯಲು ಯಾವುದೇ ಸಮಸ್ಯೆ ಇಲ್ಲ ಎಂದು ಪಟ್ಟಣದಲ್ಲಿ ಶಾಸಕರಾದ ಬಸವರಾಜು ವಿ ಶಿವಗಂಗಾ ತಿಳಿಸಿದರು. ಈ ಕುರಿತಂತೆ ಈಗಾಗಲೇ ನೀರಾವರಿ ಇಲಾಖೆ ಅಧಿಕಾರಿಗಳೊಂದಿಗೆ ಚರ್ಚೆ ಮಾಡಿದ್ದೇನೆ, ಸರ್ಕಾರದ ಮುಂದೆ ಕಾಲುವೆಗಳಿಗೆ ಹರಿಯುತ್ತಿರುವ ನೀರನ್ನು ನಿಲ್ಲಿಸುವ ಕುರಿತು ಯಾವುದೇ ಪ್ರಸ್ತಾಪ ಬಂದಿಲ್ಲ ಎನ್ನಲಾಗಿದೆ. ರೈತರು ಯಾವುದೇ ಆತಂಕಪಡಬೇಕಾಗಿಲ್ಲ, ರೈತರಿಗೆ ತೊಂದರೆಯಾಗಲು ನಾನು ಬಿಡುವುದಿಲ್ಲ ಎಂದು ತಿಳಿಸಿದರು. ಭದ್ರಾ ಜಲಾಶಯಕ್ಕೆ 170 ಅಡಿ ನೀರು ಸಂಗ್ರಹವಾದರೆ ಸಾಕು ರೈತರಿಗೆ 100 ದಿನಗಳಿಗೂ ಹೆಚ್ಚು ನೀರು ಹರಿಸಬಹುದು. ಮಲೆನಾಡು ಭಾಗದಲ್ಲಿ ಸ್ವಲ್ಪ ಮಳೆ ಪ್ರಮಾಣ ಕಡಿಮೆಯಾಗಿರುವ ಹಿನ್ನೆಲೆ ಜಲಾಶಯಕ್ಕೆ ಒಳಹರಿವು ಸ್ವಲ್ಪ ಕಡಿಮೆಯಾಗಿದೆ ಆದರೂ ಸಹ ರೈತರ ಜಮೀನುಗಳಿಗೆ ನೀರು ಹರಿಸಲು ಯಾವುದೇ ಸಮಸ್ಯೆ ಇಲ್ಲ ಮುಂದಿನ ದಿನಗಳಲ್ಲಿ ಮಳೆಯಾಗುವ ಸಾಧ್ಯತೆಯಿದೆ, ಈ ಕಾರಣ ರೈತರನ್ನ ಕೆಲವರು ದಾರಿ ತಪ್ಪಿಸುವ ಕೆಲಸ ಮಾಡುತ್ತಿದ್ದು ಇಂಥ ಮಾಹಿತಿಗಳಿಗೆ ಯಾರು ಸಹ ಕಿವಿಗೂಡಬಾರದ, ಭದ್ರಾ ಅಚ್ಚುಕಟ್ಟು ಪ್ರದೇಶದಲ್ಲಿ ಈಗಾಗಲೇ ಭತ್ತ ಬೆಳೆದ ರೈತರು ಈ ಬಗ್ಗೆ ಚಿಂತಿಸಬೇಡಿ, ಬೆಳೆ ಬೆಳೆಯಲು ನೀರು ಹರಿಸಲಾಗುತ್ತದೆ ಎಂದರು. ಹೀಗಾಗಲೇ ಆಗಸ್ಟ್ 10 ರಿಂದಲೇ ಭದ್ರಾ ಕಾಲುವೆಗೆ ನೀರನ್ನ ಹರಿ ಬಿಡಲಾಗಿದೆ, ನಿಗದಿಯಂತೆ ರೈತರ ಬೆಳೆಗಳಿಗೆ ನೀರು ಬರುತ್ತದೆ, ನಿಮ್ಮ ಪರವಾಗಿ ನಾನು ಇದ್ದೇನೆ ಎಂದು ಶಾಸಕರಾದ ಬಸವರಾಜು ವಿ ಶಿವಗಂಗಾ ರೈತರಿಗೆ ತಿಳಿಸಿದರು.

# ರೂ.740 ಕೋಟಿ ವೆಚ್ಚದಲ್ಲಿ ವಿ.ವಿ.ಸಾಗರ ನೀರಾವರಿ ಯೋಜನೆ : ಸಚಿವರು



**ಚಿತ್ರದುರ್ಗ** : ಏಷಿಯನ್ ಅಭಿವೃದ್ಧಿ ಬ್ಯಾಂಕ್ ಮೂಲಕ 740 ಕೋಟಿ ರೂ. ವೆಚ್ಚದಲ್ಲಿ ವಾಣಿವಿಲಾಸ ಸಾಗರ ಜಲಾಶಯ, ನಾಲೆಗಳ ಆಧುನೀಕರಣ, ಹನಿ ನೀರಾವರಿ ಹಾಗೂ ಅಂತರ್ಜಲ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗುವುದು. ಇದರಿಂದ ಪ್ರಸ್ತುತ 29 ಸಾವಿರ ಎಕರೆ ಪ್ರದೇಶಕ್ಕೆ ದೊರಕುತ್ತಿರುವ ನೀರಾವರಿ ಸೌಲಭ್ಯ 45 ಸಾವಿರ ಎಕರೆ ಪ್ರದೇಶಕ್ಕೆ ಏರಿಕೆಯಾಗಲಿದೆ ಎಂದು ಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಹೇಳಿದರು.

ಬುಧವಾರ ನಗರದ ಭದ್ರಾ ಮೇಲ್ದಂಡೆ ಯೋಜನೆ ಕಚೇರಿ ಸಭಾಂಗಣದಲ್ಲಿ ಎಷಿಯನ್ ಅಭಿವೃದ್ಧಿ ಬ್ಯಾಂಕ್ ನೆರವಿನಿಂದ ವಾಣಿ ವಿಲಾಸ ಸಾಗರ ನಿರಾವರಿ ಯೋಜನೆ ಆಧುನಿಕರಣ ಹಾಗೂ ನಿರ್ವಹಣೆ ಕುರಿತು ಜರುಗಿದ ಸಭೆಯ ಬಳಿಕ ಅವರು ಮಾಧ್ಯಮದವರೊಂದಿಗೆ ಮಾತನಾಡಿದರು.

**ಜಲಾಶಯಕ್ಕೆ ಕೇಂದ್ರೀಕೃತ ಸ್ವಯಂಚಾಲನಾ ನಿರ್ವಹಣೆ** : ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆ ರಾಜ್ಯ ಖಾತೆ ಸಚಿವ ಎ.ನಾರಾಯಣಸ್ವಾಮಿ ಅವರು ಮಾತನಾಡಿ, ವಾಣಿವಿಲಾಸ ಸಾಗರ ಜಲಾಶಯದಲ್ಲಿ ಈಗಿರುವ ಸೋರುವಿಕೆಯನ್ನು ತಡೆಯುವುದರ ಜೊತೆಗೆ, ಕಾಲುವೆ ನೀರಾವರಿಯಲ್ಲಿ ನೀರು ಪೋಲಾಗುವುದನ್ನು ತಡೆಯಲು, ಮಾನವ ಚಾಲಿತ ಗೇಟ್‌ಗಳ ಬದಲಿಗೆ ಕೇಂದ್ರಿಕೃತ ಸ್ವಯಂಚಾಲನ ನಿರ್ವಹಣೆ ವ್ಯವಸ್ಥೆಯನ್ನು ನಿರ್ಮಿಸಲಾಗುವುದು ಎಂದು ತಿಳಿಸಿದರು.

ವಾಣಿವಿಲಾಸ ಸಾಗರ ನೀರಾವರಿ ಯೋಜನೆ ಆಧುನೀಕರಣಕ್ಕೆ ರೂ.740 ಕೋಟಿಯನ್ನು ಏಷಿಯನ್ ಅಭಿವೃದ್ಧಿ ಬ್ಯಾಂಕ್ ಮಂಜೂರಾತಿ ನೀಡಿದೆ. ಕೇಂದ್ರ ಜಲಸಂಪನ್ಮೂಲ ಇಲಾಖೆಯ ಅಧಿಕಾರಿಗಳು ಜಲಾಶಯ ಹಾಗೂ ಅಚ್ಚುಕಟ್ಟು ಪ್ರದೇಶಗಳಿಗೆ ಭೇಟಿ ನೀಡಿದ್ದಾರೆ. ಯೋಜನೆಯನ್ನು ಯಶಸ್ವಿಯಾಗಿ ಜಾರಿಮಾಡಲು ತಜ್ಞರ ಸಲಹೆ ಪಡೆಯಲಾಗುತ್ತಿದೆ.

ನೀರು ಪೋಲಾಗುವುದನ್ನು ತಡೆಯುವುದು. ಹನಿ ನೀರಾವರಿ ಪದ್ಧತಿ ಅಳವಡಿಕೆ ಹಾಗೂ ಅಂತರ್ಜಲ ವೃದ್ಧಿಯ ಪ್ರಮುಖ ಮೂರು ಅಂಶಗಳನ್ನು ಗಮನದಲ್ಲಿ ಇರಿಸಿಕೊಂಡು ಯೋಜನೆ ರೂಪಿಸಲಾಗುತ್ತಿದೆ, ಅಲ್ಲದೆ ಬೆಳೆ ಪದ್ಧತಿ ನಿಗದಿಯ ಬಗ್ಗೆಯೂ ಚರ್ಚಿಸಿ ಕ್ರಮ ಕೈಗೊಳ್ಳಲಾಗುವುದು ಎಂದರು.

ಸಭೆಯಲ್ಲಿ ಜಿಲ್ಲಾಧಿಕಾರಿ ದಿವ್ಯಪ್ರಭು.ಜಿ.ಆರ್.ಜೆ, ವಿಶ್ವೇಶ್ವರಯ್ಯ ಜಲ ನಿಗಮದ ವ್ಯವಸ್ಥಾಪಕ ನಿರ್ದೇಶಕ ಸಣ್ಣ ಚಿತ್ತಯ್ಯ, ಎಡಿಬಿ ಟೀಮ್ ಲೀಡರ್, ನೀರಾವರಿ ಆಧುನೀಕರಣ ತಜ್ಞ ಡೇನಿಯಲ್ ರೆನಾಲ್ಟ್, ಭದ್ರಾ ಮೇಲ್ದಂಡೆ ಯೋಜನೆ ಮುಖ್ಯ ಇಂಜಿನಿಯರ್ ಕೆ.ಎಂ.ಶಿವಪ್ರಕಾಶ್, ರಾಜ್ಯ ಸರ್ಕಾರ ಜಲ ನಿರ್ವಹಣಾ ಕೇಂದ್ರ ಬಿ.ಎಸ್.ರಾವ್ ಇಂಜಿಯರ್ ಎಂ.ಜಿ.ಶಿವಕುಮಾರ್, ನಿವೃತ್ತ ಮುಖ್ಯ ಇಂಜಿನಿಯರ್ಗಳಾದ ಚೆಲುವರಾಜ್, ಶಿವಕುಮಾರ್ ಸೇರಿಂದತೆ ಮತ್ತಿರರು ಇದ್ದರು. ಕೇಂದ್ರ ಜಲ ಆಯೋಗದ ಮುಖ್ಯ ಇಂಜಿನಿಯರ್ ಡೋರ್ಗೆ ಪಿ ಗ್ಯಾಂಬಾ, ಏಷಿಯನ್ ಅಭಿವೃದ್ಧಿ ಬ್ಯಾಂಕ್ ರಾಜೇಶ್ ಯಾದವ್ ವಿಡಿಯೋ ಕಾನ್ಫರೆನ್ಸ್ ಮೂಲಕ ಸಭೆಯಲ್ಲಿ ಭಾಗವಹಿಸಿದ್ದರು.

# ವಿಧಾನ ಪರಿಷತ್ ಸ್ಥಾನಕ್ಕೆ ಮೂರು ಜನರ ಹೆಸರು ಶಿಫಾರಸ್ಸು



**ಬೆಂಗಳೂರು** : ವಿಧಾನ ಪರಿಷತ್‌ಗೆ ಮಾಜಿ ಸಚಿವರಾದ ಎಂ.ಆರ್. ಸೀತಾರಾಮ್ ಉಮಾಶ್ರೀ ಮತ್ತು ನಿವೃತ್ತ ಐಆರ್‌ಎಸ್ ಅಧಿಕಾರಿ ಸುಧಾಮ್‌ದಾಸ್ ಅವರನ್ನು ನಾಮನಿರ್ದೇಶನ ಮಾಡುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯರವರು ರಾಜ್ಯಪಾಲರಿಗೆ ಶಿಫಾರಸ್ಸು ಮಾಡಿದ್ದಾರೆ.

ವಿಧಾನ ಪರಿಷತ್‌ನಲ್ಲಿ ಖಾಲಿ ಇರುವ ಮೂರು ಸ್ಥಾನಗಳಿಗೆ ಶಿಕ್ಷಣ ಕ್ಷೇತ್ರದಿಂದ ಎಂ.ಆರ್ ಸೀತಾರಾಮ್, ಕಲಾಕ್ಷೇತ್ರದಿಂದ ಉಮಾಶ್ರೀ, ಮತ್ತು ಸಮಾಜ ಸೇವೆ ಕ್ಷೇತ್ರದಿಂದ ಸುಧಾಮ್‌ದಾಸ್ ಅವರನ್ನು ನಾಮಕರಣ ಮಾಡುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯರವರು ಇಂದು ರಾಜ್ಯಪಾಲರಿಗೆ ಶಿಫಾರಸ್ಸು ಪಟ್ಟಿಯನ್ನು ಕಳುಹಿಸಿದ್ದಾರೆ.

ವಿಧಾನ ಪರಿಷತ್‌ಗೆ ಎಂ.ಆರ್. ಸೀತಾರಂ, ಉಮಾಶ್ರೀ ಮತ್ತು ಸುಧಾಮ್ ದಾಸ್ ಇವರುಗಳನ್ನು ನಾಮ ನಿರ್ದೇಶನ ಮಾಡಲು ಕಾಂಗ್ರೆಸ್ ಹೈಕಮಾಂಡ್ ಒಪ್ಪಿಗೆ ನೀಡಿತು. ಅದರಂತೆ ಮುಖ್ಯಮಂತ್ರಿ ಸಿದ್ದರಾಮಯ್ಯರವರು ಇಂದು ರಾಜ್ಯಪಾಲರಿಗೆ ಮೂವರು ನಾಮನಿರ್ದೇಶನ ಸದಸ್ಯರ ಪಟ್ಟಿಯನ್ನು ರಾಜಭವನಕ್ಕೆ ಕಳುಹಿಸಿದ್ದು, ಈ ಪಟ್ಟಿಗೆ ರಾಜ್ಯಪಾಲರು ಅಂಕಿತ ಹಾಕಿದ ನಂತರ ಉಮಾಶ್ರಿ ಸೀತಾರಾಂ, ಸುಧಾಮ್‌ದಾಸ್ ಇವರುಗಳು ವಿಧಾನ ಪರಿಷತ್‌ನ ಸದಸ್ಯರಾಗಲಿದ್ದಾರೆ.

ವಿಧಾನ ಪರಿಷತ್‌ನ ನಾಮಕರಣಗೊಳ್ಳಲು ಕಾಂಗ್ರೆಸ್‌ನಲ್ಲಿ ಪೈಪೋಟಿಯೇ ಇತ್ತು, ಕಾಂಗ್ರೆಸ್‌ನ ಕೇಂದ್ರದ ಮಾಜಿ ಸಚಿವ ರೆಹಮಾನ್‌ಖಾನ್ ಅವರ ಪುತ್ರ ಮನ್ಸೂರ್ ಅಲಿಖಾನ್ ಅವರ ಹೆಸರು ಮುನ್ನಲೆಗೆ ಬಂದಿತ್ತಾದರೂ ಅಂತಿಮವಾಗಿ ಮನ್ಸೂರ್ ಅಲಿಖಾನ್ ಬದಲು ಉಮಾಶ್ರೀ ಅವರನ್ನು ನಾಮನಿರ್ದೇಶನ ಮಾಡಲು ಹೈಕಮಾಂಡ್ ಒಪ್ಪಿದೆ.

ಉಮಾಶ್ರೀ ಅವರನ್ನು ನಾಮನಿರ್ದೇಶನ ಮಾಡಲು ಒಪ್ಪಿಗೆ ನೀಡಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಪಟ್ಟು ಹಿಡಿದಿದ್ದರು. ಹಾಗೆಯೇ ನಿವೃತ್ತ ಐಆರ್‌ಎಸ್ ಅಧಿಕಾರಿ ಸುಧಾಮ್‌ದಾಸ್ ಅವರಿಗೆ ರಾಹುಲ್ ಅವರ ಆರ್ಶೀವಾದವಿತ್ತು. ಹೀಗಾಗಿ ಮನ್ಸೂರ್ ಅಲಿಖಾನ್ ಅವರ ಹೆಸರನ್ನು ಕೈಬಿಟ್ಟು ಉಮಾಶ್ರೀ, ಎಂ.ಆರ್. ಸೀತಾರಂ ಹಾಗೂ ಸುಧಾಮ್‌ದಾಸ್ ಅವರ ನಾಮನಿರ್ದೇಶನ ಪಟ್ಟಿಯನ್ನು ರಾಜಭವನಕ್ಕೆ ಕಳುಹಿಸಲಾಗಿದೆ.

ನಾಮನಿರ್ದೇಶನಕ್ಕೆ ಶೀಪಾರಸ್ಸು ಮಾಡಿರುವ ಮೂವರ ಪೈಕಿ ಎಂಆರ್ ಸೀತಾರಾಮ್ ಮತ್ತು ಉಮಾಶ್ರೀ ಹಿಂದುಳಿದ ವರ್ಗಕ್ಕೆ ಸೇರಿದ್ದು, ಸುಧಾಮ್‌ದಾಸ್ ಅವರುಪರಿಶಿಷ್ಟ ಜಾತಿಯ ಎಡಗೈ ಸಮುದಾಯಕ್ಕೆ ಸೇರಿದ್ದಾರೆ.ಸುಧಾಮ್‌ದಾಸ್ ಅವರು ಕಳೆದ ವಿಧಾನಸಭಾ ಚುನಾವಣೆಯಲ್ಲಿ ಸ್ವಯಂ ನಿವೃತ್ತಿ ಪಡೆದು ನೆಲಮಂಗಲ ಮೀಸಲು ಕ್ಷೇತ್ರದ ಟಿಕೆಟ್ ಆಕಾಂಕ್ಷಿಯಾಗಿದ್ದರು. ಕೊನೆಘಳಿಗೆಯಲ್ಲಿ ಟಿಕೆಟ್ ಕೈತಪ್ಪಿತು. ಹಾಗಾಗಿ ರಾಹುಲ್‌ಗಾಂಧಿ ಅವರ ಆಪ್ತರಾದ ಸುಧಾಮ್‌ದಾಸ್ ನಾಮನಿರ್ದೇಶನ ಗೊಳ್ಳುವಲ್ಲಿ ಯಶಸ್ವಿಯಾಗಿದ್ದಾರೆ,ಕಳೆದ ವಿಧಾನಸಭಾ ಚುನಾವಣೆಯಲ್ಲಿ ಮಲ್ಲೇಶ್ವರ ಕ್ಷೇತ್ರದಿಂದ ಟಿಕೆಟ್ ತ್ಯಾಗ ಮಾಡಿದ್ದ ಎಂ.ಆರ್. ಸೀತಾರಾಂ ಅವರಿಗೂ ಪರಿಷತ್ ಸದಸ್ಯರಾಗಲು ಹೈಕಮಾಂಡ್ ಅವಕಾಶ ಮಾಡಿಕೊಟ್ಟಿದೆ.

# ಕವಾಡಿಗರಹಟ್ಟಿ ಪ್ರಕರಣ ಸಿಬಿಐ ತನಿಖೆಗೆ ವಹಿಸಿ



**ಚಿತ್ರದುರ್ಗ** : ಕಲುಷಿತ ನೀರು ಸೇವಿಸಿ ಕವಾಡಿಗರಹಟ್ಟಿಯಲ್ಲಿ ಐವರು ಮೃತಪಟ್ಟು, ಇನ್ನೂರಕ್ಕೂ ಹೆಚ್ಚು ಮಂದಿ ಅಸ್ವಸ್ಥರಾಗಿರುವ ಪ್ರಕರಣವನ್ನು ರಾಜ್ಯ ಸರ್ಕಾರ ವಿಶೇಷವಾಗಿ ಪರಿಗಣಿಸಿ ಸಿಬಿಐ. ತನಿಖೆಗೆ ಒಳಪಡಿಸುವಂತೆ ಕರುನಾಡ ವಿಜಯಸೇನೆ ಜಿಲ್ಲಾಧ್ಯಕ್ಷ ಕೆ.ಟಿ.ಶಿವಕುಮಾರ್ ಒತ್ತಾಯಿಸಿದರು.

ಪತ್ರಕರ್ತರ ಭವನದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಮೃತಪಟ್ಟ ಕುಟುಂಬಗಳಿಗೆ ತಲಾ ಹತ್ತು ಲಕ್ಷ ರೂ.ಪರಿಹಾರ ನೀಡಿರುವುದು ಯಾವುದಕ್ಕೂ ಸಾಲುವುದಿಲ್ಲ. ಹಾಗಾಗಿ ಒಂದು ಕೋಟಿ ರೂ. ಗಳ ಪರಿಹಾರ ನೀಡಿ ಮೃತರ ಕುಟುಂಬದಲ್ಲಿ ಒಬ್ಬರಿಗೆ ಸರ್ಕಾರಿ ನೌಕರಿ ಕೊಡಬೇಕು. ಕವಾಡಿಗರಹಟ್ಟಿ ಅಭಿವೃದ್ದಿಗೆ ನಾಲ್ಕು ಕೋಟಿ ರೂ.ಗಳನ್ನು ಸರ್ಕಾರ ಘೋಷಿಸಿರುವ ಬಗ್ಗೆ ಜಿಲ್ಲಾ ಉಸ್ತುವಾರಿ ಸಚಿವರು ತಿಳಿಸಿರುವುದು ಸ್ವಾಗತಾರ್ಹ. ಆದರೆ ಈ ಹಣದಿಂದ ಬರೀ ಮೂಲಭೂತ ಸೌಲಭ್ಯಗಳನ್ನು ಒದಗಿಸಬಹುದಷ್ಟೆ. ಹಾಗಾಗಿ ಜಿಲ್ಲೆಯ ಎಲ್ಲಾ ಶಾಸಕರು ರಾಜ್ಯದ ಮುಖ್ಯಮಂತ್ರಿಗಳ ಬಳಿ ನಿಯೋಗ ಹೋಗಿ ಹೆಚ್ಚಿನ ಪರಿಹಾರ ಕೇಳಬೇಕೆಂದು ಆಗ್ರಹಿಸಿದರು.

ಕಲುಷಿತ ನೀರು ಸೇವಿಸಿ ಮೃತಪಟ್ಟ ಮಂಜುಳರವರ ಮಗುವಿನ ಶಿಕ್ಷಣಕ್ಕೆ ಸರ್ಕಾರವೇ ಜವಾಬ್ದಾರಿ ವಹಿಸಿಕೊಳ್ಳಬೇಕು. ಉಡುಪಿ, ಕೃಷಿ ಸಚಿವರ ಪ್ರಕರಣವನ್ನು ರಾಜ್ಯ ಸರ್ಕಾರ ತಡ ಮಾಡದೆ ಸಿಓಡಿ.ಗೆ ವಹಿಸಿದೆ ಆದರೆ ಕವಾಡಿಗರಹಟ್ಟಿ ಕಲುಷಿತ ನೀರು ಸೇವನೆ ಪ್ರಕರಣವನ್ನು ಏಕೆ ನಿರ್ಲಕ್ಷಿಸುತ್ತಿದೆ ಎನ್ನುವುದು ಯಕ್ಷ ಪ್ರಶ್ನೆಯಾಗಿದೆ ಎಂದು ಹೇಳಿದರು.

ಕವಾಡಿಗರಹಟ್ಟಿಯ ಎ.ಕೆ.ಕಾಲೋನಿಯ ಬಡ ಮಹಿಳೆಯರು ಸ್ವಸಹಾಯ ಸಂಘಗಳ ಮೂಲಕ ಪಡೆದಿರುವ ಸಾಲವನ್ನು ಮನ್ನಾ ಮಾಡುವಂತೆ ಧರ್ಮಸ್ಥಳದ ಧರ್ಮಾಧಿಕಾರಿ ಡಾ.ಡಿ.ವೀರೇಂದ್ರಹೆಗಡೆರವರಿಗೆ ಪತ್ರ ಬರೆದಿದ್ದೇನೆ. ನಮ್ಮ ಎಲ್ಲಾ ಬೇಡಿಕೆಗಳನ್ನು ಸರ್ಕಾರ ಈಡೇರಿಸದಿದ್ದರೆ ಮುಂದಿನ ಮಂಗಳವಾರದಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಧರಣಿ ನಡೆಸಲಾಗುವುದೆಂದು ಕೆ.ಟಿ.ಶಿವಕುಮಾರ್ ಗಡುವು ನೀಡಿದರು.

ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ವೀಣಗೌರಣ್ಣ, ಕಾರ್ಯದರ್ಶಿ ಜಗದೀಶ್, ಉಪಾಧ್ಯಕ್ಷ ಕೋಟೇಶ್, ಮಣಿಕಂಠ, ಅವಿನಾಶ್, ಮಂಜುನಾಥ್, ನಾಗರಾಜ್ ಮುತ್ತು, ಅಖಿಲೇಶ್ ಪತ್ರಿಕಾಗೋಷ್ಠಿಯಲ್ಲಿ ಹಾಜರಿದ್ದರು.




**ಇಂದಿನ ಚಿನ್ನ ಮತ್ತು ಬೆಳ್ಳಿ ದರಗಳು : 91.6 Kdm- 5540/gm | 85 kdam - 5140/gm | ಬೆಳ್ಳಿ : 67000 / ಕೆಜಿ**

## ಫಾಸ್ಟ್ ನ್ಯೂಸ್

### ಸಿಲಿಕಾನ್ ಸಿಟಿಯಲ್ಲಿ ಪುಂಡರ ಅಟ್ಟಹಾಸ

ನಿಂತ ವಾಹನ ಮೇಲೆ ಸೈಜ್ ಕಲ್ಲು ಹಾಕಿ ಗ್ಲಾಸ್ ಪುಡಿ ಪುಡಿ ಮಾಡಿರುವ ಘಟನೆ ಬೆಂಗಳೂರಿನಲ್ಲಿ ನಡೆದಿದೆ. ದುಷ್ಕರ್ಮಿಗಳು ಹತ್ತಕ್ಕೂ ಹೆಚ್ಚು ವಾಹನಗಳ ಗ್ಲಾಸ್ ಪುಡಿ ಪುಡಿ ಮಾಡಿ ಅಟ್ಟಹಾಸ ಮೆರೆದಿದ್ದಾರೆ. ಬೈಕ್ ನಲ್ಲಿ ಬಂದು. ಫುಟ್ ಪಾತ್ ಮೇಲಿನ ಕಲ್ಲು ತಗೊಂಡು ಕಾರು ಗ್ಲಾಸ್ ಹೊಡೆದು ಹಾಕುತ್ತಿದ್ದಾರೆ. ಕೆಂಗೇರಿ ಠಾಣಾ ವ್ಯಾಪ್ತಿಯಲ್ಲಿ ಪುಂಡರ ಅಟ್ಟಹಾಸ ಮಿತಿಮೀರಿದೆ.

### 30 ಚಿನ್ನದ ಬಿಸ್ಕೆಟ್‌ಗಳು ಜಪ್ತಿ

ಕೆಂಪೇಗೌಡ ಏರ್‌ಪೋರ್ಟ್‌ನಲ್ಲಿ 30 ಚಿನ್ನದ ಬಿಸ್ಕೆಟ್‌ಗಳು ಜಪ್ತಿ ಮಾಡಲಾಗಿದೆ. ಕೋಲ್ಕತ್ತಾದಿಂದ ಅಕ್ರಮವಾಗಿ ಚಿನ್ನದ ಬಿಸ್ಕೆಟ್ ಸಾಗಿಸುತ್ತಿದ್ದ ವ್ಯಕ್ತಿಯಿಂದ 36 ಲಕ್ಷ ಮೌಲ್ಯದ 600 ಗ್ರಾಂ ತೂಕದ 30 ಚಿನ್ನದ ಬಿಸ್ಕೆಟ್‌ಗಳನ್ನು ಕೆಂಪೇಗೌಡ ಏರ್‌ಪೋರ್ಟ್ ಕಸ್ಟಮ್ಸ್ ಅಧಿಕಾರಿಗಳು ವಶಕ್ಕೆ ಪಡೆದಿದ್ದಾರೆ.

### ಕಾಂಗ್ರೆಸ್‌ನಲ್ಲಿ ಭಿನ್ನಮತ ಸ್ಫೋಟ

ಸ್ವಪಕ್ಷದ ವಿರುದ್ಧವೇ ಮುಖಂಡರು, ಕಾರ್ಯಕರ್ತರು ತಿರುಗಿಬಿದ್ದಿದ್ದಾರೆ. ತಿಪಟೂರು ಶಾಸಕ ಷಡಕ್ಷರಿ ವಿರುದ್ಧ ಕಾರ್ಯಕರ್ತರು ಆಕ್ರೋಶ ಹೊರ ಹಾಕಿದ್ದಾರೆ. ಚುನಾವಣೆಯಲ್ಲಿ ಗೆದ್ದ ನಂತರ ಷಡಕ್ಷರಿ ನಮ್ಮನ್ನು ಕಡೆಗಣಿಸಿದ್ದಾರೆ. ಲೋಕೇಶ್ವರ್?ಗೆ ಸೂಕ್ತ ಸ್ಥಾನಮಾನ ನೀಡುವಂತೆ ಬೆಂಬಲಿಗರು ಒತ್ತಾಯಿಸಿದ್ದಾರೆ. ಇಲ್ಲದಿದ್ರೆ ಮುಂದಿನ ಚುನಾವಣೆಯಲ್ಲಿ ತಕ್ಕಪಾಠ ಕಲಿಸುವುದಾಗಿ ತಿಪಟೂರು 'ಕೈ' ಮುಖಂಡ ಲೋಕೇಶ್ವರ್ ಬೆಂಬಲಿಗರು ಎಚ್ಚರಿಕೆ ಕೊಟ್ಟಿದ್ದಾರೆ.

### ಬಿಬಿಎಂಪಿಯಲ್ಲಿ ಕಾಣಿಸಿಕೊಂಡ ಬೆಂಕಿ

ಬಿಬಿಎಂಪಿ ಕೇಂದ್ರ ಕಚೇರಿ ಆವರಣದ ಲ್ಯಾಬ್‌ನಲ್ಲಿ ಬೆಂಕಿ ಕಾಣಿಸಿಕೊಂಡ ಪ್ರಕರಣಕ್ಕೆ ಸಂಬಂಧಿಸಿ ಆಗಸ್ಟ್ 30ರೊಳಗೆ ಪ್ರಕರಣದ ತನಿಖಾ ವರದಿ ಸಲ್ಲಿಸಲು ಡೆಡ್‌ಲೈನ್ ನೀಡಲಾಗಿದೆ. ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್‌ಗೆ ಬಿಬಿಎಂಪಿ ಪ್ರಮುಖ ಇಂಜಿನಿಯರ್ ಪ್ರಹ್ಲಾದ್ ವರದಿ ಸಲ್ಲಿಸಲಿದ್ದಾರೆ. ಪ್ರಕರಣದ ಬಗ್ಗೆ ನಾಳೆಯಿಂದ ಆಂತರಿಕ ತನಿಖೆ ಅಧಿಕೃತವಾಗಿ ಆರಂಭವಾಗಲಿದೆ.

### ಕಾರು ಡಿಕ್ಕಿಯಾಗಿ ಪಾದಚಾರಿ ಸಾವು

ತುಮಕೂರು ಜಿಲ್ಲೆ ಕುಣಿಗಲ್ ತಾಲೂಕಿನ ಸಂತೆ ಮಾವತ್ತೂರು ಬಳಿ ಕಾರು ಡಿಕ್ಕಿಯಾಗಿ ಪಾದಚಾರಿ ಗಂಗಹುಚ್ಚಯ್ಯ (54) ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಕುಣಿಗಲ್ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

### ಬಂಡಿಪುರ ಅಭಯಾರಣ್ಯಕ್ಕೆ ಎದುರಾಯ್ತು ದೊಡ್ಡ ಕಂಟಕ

ಬಂಡೀಪುರ ಅಭಯಾರಣ್ಯಕ್ಕೆ ಕಂಟಕ ಎದುರಾಗಿದೆ. ಲ್ಯಾಂಟನ ಬಳಿಕ ಈಗ ಸೆನ್ನಾ ಸೆಪ್ಟಾಬ್ಲಿಶ್ ಸಸ್ಯ ಥಳಿ ಕಾಡಿಗೆ ಮುಳುವಾಗುತ್ತಿದೆ. ಕಳೆದ ಎರಡು ವರ್ಷದಲ್ಲಿ ಕಾಡಿನಾದ್ಯಂತ ಸೆನ್ನಾ ಸೆಪ್ಟಾಬ್ಲಿಶ್ ಥಳಿ ಹರಡಿದೆ. ಸೆನ್ನಾ ಸೆಪ್ಟಾಬ್ಲಿಶ್ ಹುಟ್ಟಿದ ಸುತ್ತಾ ಮುತ್ತಾ ಬೇರೆ ಯಾವ ಸಸ್ಯವನ್ನ ಬೆಳೆಯಲು ಬಿಡುವುದಿಲ್ಲ. ರಕ್ತ ಬೀಜಾಸುರನ ತರ ಒಂದು ಗಿಡವನ್ನ ಕಿತ್ತು ಹಾಕಿದ್ರೆ ಅದೇ ಜಾಗದಲ್ಲಿ ನಾಲ್ಕೈದು ಸಸ್ಯ ಹುಟ್ಟುತ್ತಿದೆ. ಅರಣ್ಯಾಧಿಕಾರಿಗಳಿಗೆ ಹೊಸ ತಲೆ ನೋವು ತಂದಿದೆ.

### ಕೆಂಡಗಣ್ಣ ಸ್ವಾಮಿ ಗದ್ದುಗೆ ಅರ್ಚಕ ನಿಧನ

ಮೈಸೂರು ಜಿಲ್ಲೆ ಹುಣಸೂರು ತಾಲೂಕಿನ ಕೆಂಡಗಣ್ಣ ಸ್ವಾಮಿ ಗದ್ದುಗೆ ಅರ್ಚಕ ಕರಿಬಸವ ಶಾಸ್ತ್ರಿ(65) ಅನಾರೋಗ್ಯದಿಂದ ವಿಧಿವಶರಾಗಿದ್ದಾರೆ. ಹಲವು ವರ್ಷಗಳಿಂದ ಗದ್ದಿಗೆಯ ಮಹದೇಶ್ವರ ದೇಗುಲ ಚನ್ನಮಲ್ಲೇಶ್ವರ ದೇವಾಲಯದಲ್ಲಿ ಅರ್ಚಕರಾಗಿ ಸೇವೆ ಸಲ್ಲಿಸುತ್ತಿದ್ದ ಕರಿವಸವ ಶಾಸ್ತ್ರಿ ನಿಧನ.

### ಹಾಸನಾಂಬೆ ಜಾತ್ರಾ ಮಹೋತ್ಸವ

ವರ್ಷಕ್ಕೆ ಒಮ್ಮೆ ಮಾತ್ರ ದರ್ಶನ ಕರುಣಿಸುವ ಹಾಸನಾಂಬೆ ಜಾತ್ರೆಗೆ ಮುಹೂರ್ತ ನಿಗದಿಯಾಗಿದೆ. ನವೆಂಬರ್ 2 ರಿಂದ ನವೆಂಬರ್ 15 ರವರೆಗೆ ಶಕ್ತಿ ದೇವತೆಯ ಜಾತ್ರೆ ನಡೆಯಲಿದೆ.

### ಬಿಜೆಪಿ ಬಿಟ್ಟು ಹೋಗುವುದಿಲ್ಲ



ಕೆಲ ಬಿಜೆಪಿ ಶಾಸಕರು ಕಾಂಗ್ರೆಸ್ ಪಕ್ಷ–ಕ್ಕೆ ಮರಳುತ್ತಾರೆಂಬ ವಿಚಾರಕ್ಕೆ ಸಂಬಂಧಿಸಿ ನಾನಂತೂ ಬಿಜೆಪಿ ಬಿಟ್ಟು ಹೋಗುವುದಿಲ್ಲ ಎಂದು ಆರ್.ಆರ್. ನಗರ ಶಾಸಕ ಮುನಿರತ್ನ ತಿಳಿಸಿದ್ದಾರೆ. 17 ಜನರಲ್ಲಿ ಯಾರು ಕಾಂಗ್ರೆಸ್‌ಗೆ ಹೋಗುತ್ತಾರೋ ಗೊತ್ತಿಲ್ಲ. ಕಾಂಗ್ರೆಸ್ ಪಕ್ಷಕ್ಕೆ ಮತ್ತೆ ಹೋಗುವ ಅವಶ್ಯಕತೆ ನನಗೆ ಇಲ್ಲ. ಅಗತ್ಯ ಬಿದ್ದರೆ ನಾನು ರಾಜಕೀಯದಿಂದ ನಿವೃತ್ತಿಯಾಗುತ್ತೇನೆ. ಆದರೆ ಕಾಂಗ್ರೆಸ್? ಪಕ್ಷಕ್ಕೆ ಮರಳಿ ಹೋಗುವುದಿಲ್ಲ ಎಂದರು.

# ಪುರಸಭೆಯಲ್ಲಿ ಶಾಸಕ ಬಿ.ಜಿ.ಗೋವಿಂದಪ್ಪರವರಿಂದ ಧ್ವಜಾರೋಹಣ



**ಹೊಸದುರ್ಗ :** ಪಟ್ಟಣದ ಪುರಸಭೆಯಲ್ಲಿ ಮಂಗಳವಾರ ಆಯೋಜಿಸಲಾಗಿದ್ದ 77 ನೇ ಸ್ವಾತಂತ್ರೋತ್ಸವ ಸಮಾರಂಭದಲ್ಲಿ ಶಾಸಕ ಬಿ.ಜಿ.ಗೋವಿಂದಪ್ಪ ಅವದು ಧ್ವಜಾರೋಹಣ ನೆರವೇರಿಸಿದರು.

ವಿಧಾನಸಭಾ ಚುನಾವಣೆಯಲ್ಲಿ ಗೆದ್ದು ಬಂದ ನಂತರ ಪ್ರಥಮವಾಗಿ ರಾಷ್ಟ್ರೀಯ ದಿನ ಸ್ವಾತಂತ್ರ್ಯ ದಿನದಲ್ಲಿ ಭಾಗವಹಿಸದ ಶಾಸಕ ಬಿ.ಜಿ ಗೋವಿಂದಪ್ಪ ಆಜಾದಿ ಕಾ ಅಮೃತ್ ಮಹೋತ್ಸವ ಹಿನ್ನೆಲೆಯಲ್ಲಿ ಪಟ್ಟಣದ ಪುರಸಭೆಯು ವಿಜೃಂಭಣೆಯಿಂದ ಆಚರಿಸಲಾಯಿತು.ಶಾಸಕರು ಪುರಸಭೆ ಸದಸ್ಯರೊಂದಿಗೆ ಸಂಭ್ರಮಿಸಿ ಗಣೇಶ ದೇವಸ್ಥಾನ ಮುಂಭಾಗದಲ್ಲಿ ಸ್ವಾತಂತ್ರ ಹೋರಾಟದಲ್ಲಿ ಮಡಿದ ವೀರರಿಗೆ ಪುಷ್ಪಾರ್ಚನೆ ಮಾಡಿ ಪಟ್ಟಣವನ್ನು ಸರ್ವೋತೋಮುಖ ಅಭಿವೃದ್ಧಿ ನನ್ನ ಗುರಿ ಎಂದು ತಿಳಿಸಿದರು.

ಪುರಸಭೆ ಮುಖ್ಯಾಧಿಕಾರಿ ಜಿ.ವಿ ತಿಮ್ಮರಾಜು ಮಾತನಾಡಿ ಪುರಸಭೆಯ 23 ವಾರ್ಡಗಳಲ್ಲಿ ಮೂಲಭೂತ ಸೌಕರ್ಯಗಳಾದ ಸ್ವಚ್ಛತೆ, ಕುಡಿಯುವ ನೀರು ಹಾಗೂ ಬೀದಿದೀಪ ನಿರ್ವಹಣೆ ಸಮರ್ಪಕವಾಗಿ ನಿರ್ವಹಿಸುತ್ತ ಬಂದಿದ್ದು ರಾಷ್ಟ್ರೀಯ ಹಬ್ಬ ಹಿನ್ನೆಲೆಯಲ್ಲಿ ಜನತೆಗೆ ಶುಭ ಕೋರಿದರು. ಎಲ್ಲಾ 23 ವಾರ್ಡಗಳ ಸದಸ್ಯರು ಹಾಗೂ ಅಧಿಕಾರಿಗಳು ಜೊತೆಗೂಡಿ ಶಾಸಕರ ಮೂಲಕ ಸರ್ಕಾರದಿಂದ ಅನುದಾನ ಪಡೆದು ರಸ್ತೆ ಅಭಿವೃದ್ಧಿ ಕೆಲಸ ಮಾಡಲಾಗುವುದು ಎಂದರು.

ಈ ಸಂದರ್ಭದಲ್ಲಿ ಪುರಸಭಾ ಮಾಜಿ ಉಪಾದ್ಯಕ್ಷೆ ಜ್ಯೋತಿಕೆಂಚಪ್ಪ ಸದಸ್ಯರಾದ ದೊಡ್ಡಯ್ಯ, ಜಾಫರ್ ಸಾದಿಕ್, ರಾಮಚಂದ್ರಪ್ಪ, ಶಂಕರಪ್ಪ , ಪುಷ್ಪಗಂಗಾಧರ್, ದಾಳಿಂಬೆ ಗಿರೀಶ್ ಮತ್ತು ಸ್ವಾತಿಪ್ರದೀಪ್ ಮತ್ತು ಕಂದಾಯ ನಿರೀಕ್ಷಕ ಜಿ.ಎನ್ ಕುಮಾರ್, ಆ ನೀ ಕಲ್ಪನಾ, ಪ್ರದೀಪ್ ಸಿಬ್ಬಂದಿಗಳಾದ ಸಾವಿತ್ರಿ, ಕಾವ್ಯ, ತಿಪ್ಪೇಶ ವಿಕಾಸ್, ರಫೀಕ್, ಅಶ್ವಿನಿ ಹಾಜರಿದ್ದರು.

# ಸ್ವಾತಂತ್ರ್ಯದ ಸವಿನೆನಪಿಗಾಗಿ ಶಾಲೆ ದತ್ತು ಪಡೆದ ಸದ್ಗುರು ಸಂಸ್ಥೆ

**ಹೊಸದುರ್ಗ :** ಸ್ವಾತಂತ್ರ್ಯ ದಿನಾಚರಣೆಯ ಸವಿನೆನಪಿಗಾಗಿ ಸದ್ಗುರು ಆಯುರ್ವೇದ ಸಂಸ್ಥೆ ಜೋಡಿ ತುಂಬಿನಕೆರೆ ಗ್ರಾಮದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯನ್ನು ದತ್ತು ಪಡೆಯಲಿದ್ದು, ಶಾಲೆಯ ಅಭಿವೃದ್ಧಿಗೆ ಸಂಸ್ಥೆಯ ವತಿಯಿಂದ ಬೇಕಾದ ಎಲ್ಲಾ ಮೂಲ ಸೌಕರ್ಯಗಳನ್ನು ಕಲ್ಪಿಸುವ ವ್ಯವಸ್ಥೆ ಮಾಡುತ್ತೇವೆ ಎಂದು ಸದ್ಗುರು ಆಯುರ್ವೇದ ಸಂಸ್ಥೆಯ ಮಾಲೀಕ ಡಿ.ಎಸ್.ಪ್ರದೀಪ್ ಹೇಳಿದರು.

ತಾಲೂಕಿನ ಕಸಬಾ ಹೋಬಳಿಯ ಜೋಡಿ ತುಂಬಿನಕೆರೆ ಗ್ರಾಮದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲಾ ಆವರಣದಲ್ಲಿ ಮಂಗಳವಾರ ನಡೆದ ಸ್ವಾತಂತ್ರ್ಯ ದಿನಾಚರಣೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿ ಅವರು ಮಾತನಾಡಿದರು.

ನಮ್ಮ ಸಂಸ್ಥೆ ಈಗಾಗಲೇ, 4 ಶಾಲೆಗಳನ್ನು ದತ್ತು ಪಡೆದಿದ್ದು, ಅದರಂತೆಯೇ ಜೋಡಿ ತುಂಬಿನಕೆರೆ ಗ್ರಾಮದ ಶಾಲೆಯನ್ನು ದತ್ತು ಪಡೆಯಲಿದೆ. ಮಕ್ಕಳ ಕಲಿಕೆಗೆ ಪೂರಕವಾದ



ವಾತಾವರಣವನ್ನು ನಿರ್ಮಾಣ ಮಾಡಿ, ಗ್ರಾಮೀಣ ಭಾಗದ ಮಕ್ಕಳು ಉನ್ನತ ಹುದ್ದೆಗಳನ್ನು ಅಲಂಕರಿಸಬೇಕೆಂಬುದು ನಮ್ಮ ಸಂಸ್ಥೆಯ ಆಶಯವಾಗಿದೆ ಎಂದು ಹೇಳಿದರು.

ಜಿಲ್ಲಾ ಜನಜಾಗೃತಿ ವೇದಿಕೆಯ ಸದಸ್ಯ ತುಂಬಿನಕೆರೆ ಬಸವರಾಜ್ ಮಾತನಾಡಿ, ನಾವು ಇಂದು ಮಕ್ಕಳಿಗೆ ನೈಜ ಸ್ವಾತಂತ್ರ್ಯ ಹೋರಾಟಗಾರರ ಇತಿಹಾಸವನ್ನು ಹೇಳಿಕೊಡಬೇಕಿದೆ. ಬ್ರಿಟಿಷರು ದೇಶದಿಂದ ಹೊರಹೋಗುವಾಗ ಅಖಂಡ ಭಾರತವನ್ನು ವಿಭಜನೆ ಮಾಡಿದರು. ನಮ್ಮ ಕೆಚ್ಚೆದೆಯ ಸ್ವಾತಂತ್ರ್ಯ ಹೋರಾಟಗಾರರು ತಮ್ಮ ಪ್ರಾಣವನ್ನು ಲೆಕ್ಕಿಸದೆ ಬ್ರಿಟಿಷರ ವಿರುದ್ಧ ಹೋರಾಡಿದ್ದರಿಂದ ನಮಗೆ ಸ್ವಾತಂತ್ರ್ಯ ದೊರೆತಿದೆ. ನಮ್ಮ ಜೀವನದದ್ದಕ್ಕೂ ರಾಷ್ಟ್ರಪ್ರೇಮವನ್ನು ಬೆಳೆಸಿಕೊಂಡು ರಾಷ್ಟ್ರ ಕಾರ್ಯದಲ್ಲಿ ತೊಡಗಿಕೊಳ್ಳಬೇಕು. ಹಾಗೆಯೇ, ಸ್ವಾತಂತ್ರ್ಯಕ್ಕಾಗಿ ತಮ್ಮ ಪ್ರಾಣಗಳನ್ನು ಅರ್ಪಣೆ ಮಾಡಿದ ವೀರ ಹೋರಾಟಗಾರರನ್ನು ಸ್ಮರಿಸಿಕೊಳ್ಳಬೇಕೆಂದು ಮಕ್ಕಳಿಗೆ ಸಲಹೆ ನೀಡಿದರು.

ಈ ವೇಳೆ ಶಾಲಾ ಅಭಿವೃದ್ಧಿ ಸಮಿತಿ ಅಧ್ಯಕ್ಷ ರವಿಕುಮಾರ್, ಮುಖ್ಯ ಶಿಕ್ಷಕ ಕೇಶವಮೂರ್ತಿ, ಸಹ ಶಿಕ್ಷಕ ಜಯಪ್ಪ, ಗ್ರಾಮದ ಮುಖಂಡರಾದ ಬಸವರಾಜು, ರಾಜಪ್ಪ, ಗಿರೀಶ್, ರಮೇಶ್ ಮತ್ತು ಮಲ್ಲಿಕಾರ್ಜುನ್ ಸೇರಿದಂತೆ ಗ್ರಾಮಸ್ಥರು ಹಾಗೂ ಶಾಲಾ ಮಕ್ಕಳು ಇದ್ದರು.

# ಜೀವನದ ಶಾಂತಿ ನೆಮ್ಮದಿಗೆ ಈಶ್ವರಿ ವಿಶ್ವವಿದ್ಯಾಲಯಕ್ಕೆ ಬನ್ನಿ



**ಹೊಸದುರ್ಗ :** ಮನುಷ್ಯನ ಒತ್ತಡದ ಜೀವನದಲ್ಲಿ ಶಾಂತಿ,ನೆಮ್ಮದಿಗೆ ಈಶ್ವರಿ ವಿದ್ಯಾಲಯಕ್ಕೆ ಬರಬೇಕು. ನನಗೂ ಸಹಾ ಶಾಂತಿ ಮತ್ತು ನೆಮ್ಮದಿ ಕಂಡಂತಹ ಅನುಭವವಾಗುತ್ತಿದೆ ಎಂದು ಶಾಸಕ ಬಿ.ಜಿ.ಗೋವಿಂದಪ್ಪ ತಿಳಿಸಿದರು.

ಪಟ್ಟಣದ ಈಶ್ವರಿ ವಿಶ್ವ ವಿಶ್ವವಿದ್ಯಾಲಯದಲ್ಲಿ ಆಯೋಜಿಸಲಾಗಿದ್ದ ನೂತನ ಶಾಸಕರಿಗೆ ಸನ್ಮಾನ ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದರು.

ಜನಸೇವೆಯಲ್ಲಿ ಭಗವಂತನ ಸೇವೆ ಇದೆ ಎಂದು ತಿಳಿದು ಕೊಂಡು ನಾನು ಜನ ಸೇವೆ ಮಾಡುತ್ತಾ ಬಂದಿದ್ದೇನೆ ಮುಂದೆಯೂ ಸಹಾ ಜನ ಸೇವೆಯನ್ನ ಮಾಡುತ್ತೇನೆ ಎಂದು ತಿಳಿಸಿದ ಅವರು ಈಶ್ವರಿ ವಿಶ್ವ ವಿಶ್ವವಿದ್ಯಾಲಯದವರು ಸರ್ವಧರ್ಮವರನ್ನು ಸ್ವೀಕರಿಸುವ ಇದೊಂದು ಎಕೈಕ ವಿಶ್ವವಿದ್ಯಾಲಯ ಇಲ್ಲಿ ಶಾಂತಿ ಸುಖ ನೆಮ್ಮದಿ ಅಷ್ಟೇ ಅಲ್ಲಾ ಆರೋಗ್ಯ ಮತ್ತು ಆನಂದ ಪ್ರಾಪ್ತಿಯಾಗುತ್ತದೆ ಈ ನಿಟ್ಟಿನಲ್ಲಿ ಇಂತಹ ಸಂಸ್ಥೆಗಳು ಬೆಳೆಯಬೇಕು,ಸರ್ವರಿಗೂ ಸಹಾ ಮಾರ್ಗದರ್ಶನವಾಗಬೇಕು ಸ್ವ ಪರಿವರ್ತನೆಯಿಂದ ವಿಶ್ವ ಕಲ್ಯಾಣದಿಂದ ವಿಶ್ವ ಪರಿವರ್ತನೆಯ ಕಾರ್ಯವನ್ನ ಸಲ್ಲಿಸುತ್ತಿರುವ ಇವರ ಒಂದು ಸಂಸ್ಥೆಯ ಚಟುವಟಿಕೆಗಳು ವರ್ಣಾನತೀತವಾಗಿವೆ,ಸರ್ವ ಧರ್ಮ ಸಂಸ್ಥೆಯಾದ ಈಶ್ವರಿ ವಿಶ್ವ ವಿಶ್ವವಿದ್ಯಾಲಯಕ್ಕೆ ಯಾವ ರೀತಿಯ ಸಹಾಯವಾಗಬೇಕೋ ಅಂತಹ ಸಹಾವನ್ನ ಮಾಡುತ್ತೇನೆ ಎಂಬ ಭರವಸೆಯನ್ನ ನೀಡಿದರು.

ಈಶ್ವರಿ ವಿಶ್ವ ವಿಶ್ವವಿಧ್ಯಾಲಯದ ಪವಿತ್ರಕ್ಕ ಮಾತನಾಡಿ ರಾಜಕಾರಣಿಗಳಿಗೆ ಮೋದಲು ಸಹನೆ, ತಾಳ್ಮೆ,ಸೌಜನ್ಯದಿಂದ ಮಾತನಾಡಿಸುವ ಗುಣ ಇರಬೇಕು. ಎಲ್ಲಕ್ಕಿಂತ ಹೆಚ್ಚಾಗಿ ಜನರನ್ನ ಪ್ರೀತಿಸುವಂತಹ ಹೃದಯವಂತಿಕೆ ಬೇಕು. ಈ ಎಲ್ಲಾ ಗುಣಗಳು ಶಾಸಕ ಗೋವಿಂದಪ್ಪ ಅವರಲ್ಲಿವೆ ಅವರು ನಾಲ್ಕು ಭಾರಿ ಕ್ಷೇತ್ರವನ್ನ ಪ್ರತಿನಿಧಿಸಿದಂತವರು ಈ ಹಿಂದೆಯೂ ಸಹಾ ಸಾಕಷ್ಟು ಜನೋಪಕಾರಿ ಕೆಲಸಗಳನ್ನ ಮಾಡಿದ್ದಾರೆ. ಮುಂದಿನ ದಿನಗಳಲ್ಲಿಯೂ ಸಹಾ ಶಾಸಕರು ತಾಲೂಕಿನ ಅಭಿವೃದ್ದಿಯ ಕೆಲಸಗಳನ್ನು ಮಾಡಲಿ ಎಂದು ಶುಭ ಹಾರೈಸಿದರು.

ಕಾಂಗ್ರೆಸ್ ಮುಖಂಡ ಅಗ್ರೋ ಹೆಚ್.ಶಿವಣ್ಣ ಅಧ್ಯಕ್ಷತೆ ವಹಿಸಿದ್ದರು ಮುಖ್ಯ ಅತಿಥಿಗಳಾಗಿ ಇಲ್ಕಲ್‌ಅಜ್ಜಪ್ಪ, ಉಮೇಶ್, ಓಂಕಾರಪ್ಪ, ಇಸ್ಮಾಯಿಲ್‌ಸುಹಾನ. ಹೊನ್ನೇಕೆರೆ ನಾಗರಾಜ್, ಹಾಗೂ ಈಶ್ವರಿಯ ಪರಿವಾರದ ಎಲ್ಲಾ ಸದಸ್ಯರು ಉಪಸ್ಥಿತರಿದ್ದರು.

# ಮಾತೃಶ್ರೀ ವಿದ್ಯಾಸಂಸ್ಥೆಯಲ್ಲಿ ಸ್ವಾತಂತ್ರ್ಯ ದಿನಾಚರಣೆ



**ಚಿತ್ರದುರ್ಗ :** ನಗರದ ಸ್ಟೇಡಿಯಂ ರಸ್ತೆಯಲ್ಲಿರುವ ಮಾತೃಶ್ರೀ ವಿದ್ಯಾಸಂಸ್ಥೆಯಲ್ಲಿ ಭಾರತದ 77 ನೇ ಸ್ವಾತಂತ್ರ್ಯ ದಿನಾಚರಣೆಯಂದು ಧ್ವಜಾರೋಹಣ ನೆರವೇರಿಸಲಾಯಿತು.

ಮಾತೃಶ್ರೀ ವಿದ್ಯಾಸಂಸ್ಥೆಯ ಆಡಳಿತಾಧಿಕಾರಿ ವಿ.ಎಲ್.ಪ್ರವೀಣ್, ಕಾರ್ಯಕಾರಿ ಸದಸ್ಯರಾದ ಶ್ರೀಮತಿ ಗೌರಿ ಡಾ.ವಿ.ಎಲ್.ಪ್ರಶಾಂತ್, ಶ್ರೀಮತಿ ಕಾವ್ಯ, ಪ್ರಾಚಾರ್ಯರಾದ ಸಿ.ಎಂ.ಚಂದ್ರಶೇಖರ್, ಮುಖ್ಯ ಶಿಕ್ಷಕ ಮಹಾಂತೇಶ್, ಸಂಯೋಜಕಿ ಶ್ರೀಮತಿ ಲಕ್ಷ್ಮಿದೇಸಾಯಿ, ಶಿಕ್ಷಕ ವೃಂದದವರು ಸ್ವಾತಂತ್ರ್ಯ ದಿನಾಚರಣೆಯಲ್ಲಿ ಭಾಗವಹಿಸಿದ್ದರು.

# ಪಂದ್ಯ ಗೆದ್ದ ವಿದ್ಯಾರ್ಥಿಗಳು



**ಹೊಸದುರ್ಗ :** ತಾಲೂಕಿನ ಶ್ರೀರಾಂಪುರ ಹೋಬಳಿ ಮಟ್ಟದ ಕ್ರೀಡಾಕೂಟದಲ್ಲಿ ತಾಲೂಕಿನ ಅರಲಹಳ್ಳಿ ಶ್ರೀ ಜಗದಾಂಬ ವಸತಿ ಪ್ರೌಢಶಾಲೆಯ ವಿದ್ಯಾರ್ಥಿಗಳು ಗುಂಪು ಆಟದಲ್ಲಿ ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯರ ಕಬ್ಬಡ್ಡಿ ಆಟದಲ್ಲಿ ಪ್ರಥಮ ಸ್ಥಾನವನ್ನು ಪಡೆದಿದ್ದು ಜೊತೆಗೆ ಅಥ್ಲೆಟಿಕ್ಸ್ ವಿಭಾಗದಲ್ಲಿ 100 ಮೀಟರ್ ಓಟದಲ್ಲಿ ಪ್ರಥಮ ಸ್ಥಾನ, ಉದ್ದ ಜಿಗಿತದಲ್ಲಿ ಪ್ರಥಮ ಸ್ಥಾನ, ರಿಲೇ ಪ್ರಥಮ ಸ್ಥಾನ ಹಾಗೂ ಸರಪಳಿ ಎಸೆತ ಪ್ರಥಮ ಸ್ಥಾನ ಪಡೆದಿರುತ್ತಾರೆ ಈ ಸಂದರ್ಭದಲ್ಲಿ ಪ್ರೌಢಶಾಲಾ ಸಹ ಶಿಕ್ಷಕರ ಸಂಘದ ಅಧ್ಯಕ್ಷ ಪ್ರಕಾಶ್ ಎನ್ ಓ ಹಾಗೂ ತಾಲೂಕ್ ಟಿಪಿಓ ಶ್ರೀನಿವಾಸ್ ಹಾಗೂ ತಾಲೂಕ್ ದೈಹಿ ಶಿಕ್ಷಕರ ಸಂಘದ ಗೌರವಾಧ್ಯಕ್ಷ ದಿವಾಕರ್ ಅಧ್ಯಕ್ಷ ಮಹಾಂತೇಶ್ ಕಾರ್ಯದರ್ಶಿ ಮಲ್ಲಿಕಾರ್ಜುನ್ ಹಾಗೂ ಶಾಲೆಯ ಸಿಬ್ಬಂದಿಗಳಾದ ಶಿವಣ್ಣ ಕೆ ವಸಂತ್ ಕುಮಾರ್ ಗಿರೀಶ್ ರಾಮಣ್ಣ ದೈಹಿಕ ಶಿಕ್ಷಕರು ಹಾಗೂ ಕಾರ್ಯದರ್ಶಿ ಹರೀಶ್ ರವರು ಈ ಸಂದರ್ಭದಲ್ಲಿ ಉಪಸಿತರಿದ್ದರು.

## ಫಾಸ್ಟ್ ನ್ಯೂಸ್

### ಪಕ್ಷಕ್ಕೆ ಯಾರೇ ಬಂದರೂ ಸ್ವಾಗತ



ಕಾಂಗ್ರೆಸ್ ಪಕ್ಷಕ್ಕೆ ಯಾ–ರೇ ಬಂದರೂ ಸ್ವಾಗತ. ಪಕ್ಷ ಸೇರ್ಪಡೆ ಬಗ್ಗೆ ಹೈಕಮಾಂಡ್? ಅಂತಿಮ ನಿರ್ಧಾರ ಕೈಗೊಳ್ಳುತ್ತೆ ಎಂದು ಬೆಂಗಳೂರಿನಲ್ಲಿ ಕಾಂಗ್ರೆಸ್ ಸಂಸದ ಡಿ.ಕೆ.ಸುರೇಶ್ ಹೇಳಿದರು. ಲೋಕಸಭಾ ಚುನಾವಣೆ ಬಗ್ಗೆ ದೆಹಲಿಯಲ್ಲಿ ಸಭೆ ನಡೆದಿದೆ. ಯಾವ ರೀತಿ ಚುನಾವಣೆ ಎದುರಿಸಬೇಕು ಎಂದು ಚರ್ಚೆ ಆಗಿದೆ. ಅಭ್ಯರ್ಥಿ ಆಯ್ಕೆಗೆ ಮಾನದಂಡಗಳೇನು ಎಂಬ ಬಗ್ಗೆ ಚರ್ಚಿಸಲಾಗಿದೆ ಎಂದರು.

### 300ರಿಂದ400 ಕೋಟಿ ಹಣ ಲೂಟಿ

ಭ್ರಷ್ಟಾಚಾರದಲ್ಲಿ ಸಚಿವ ಚಲುವರಾಯಸ್ವಾಮಿಗೆ ಮೊದಲ ಸ್ಥಾನ. ಚಲುವರಾಯಸ್ವಾಮಿ 300ರಿಂದ 400 ಕೋಟಿ ಹಣ ಲೂಟಿ ಹೊಡೆದಿದ್ದಾನೆ ಎಂದು ಮಂಡ್ಯ ಜಿಲ್ಲೆ ನಾಗಮಂಗಲದಲ್ಲಿ ಮಾಜಿ ಶಾಸಕ ಸುರೇಶ್ ಗೌಡ ಆರೋಪ ಮಾಡಿದ್ದಾರೆ. ಕಾಂಗ್ರೆಸ್ ಸರ್ಕಾರ ಭ್ರಷ್ಟಾಚಾರ ಮಾಡಿ ಹಣವನ್ನು ಏರ್‌ಲಿಫ್ಟ್ ಮಾಡ್ತಿದೆ. ಹಿಂದಿನ ಸರ್ಕಾರದಲ್ಲಿ ಜೆಸಿಬಿಯಲ್ಲಿ ಹಣ ತುಂಬುತ್ತಾರೆ ಅಂತಿದ್ರು. ಆದರೆ ಈ ಸರ್ಕಾರ ಭ್ರಷ್ಟ ಹಣವನ್ನು ಏರ್‌ಲಿಫ್ಟ್ ಮಾಡ್ತಿದೆ. ಈ ಸರ್ಕಾರದವರು ರಾಜ್ಯವನ್ನೇ ಲೂಟಿ ಹೊಡೆಯುತ್ತಿದ್ದಾರೆ ಎಂದು ನಾಗಮಂಗಲದಲ್ಲಿ ಮಾಜಿ ಶಾಸಕ ಸುರೇಶ್ ಗೌಡ ಆರೋಪ ಮಾಡಿದ್ದಾರೆ.

### ಸಚಿವ ತಿಮ್ಮಾಪುರ ದಿಢೀರ್ ಭೇಟಿ

ಬಾಗಲಕೋಟೆ ಜಿಲ್ಲೆಯ ಮುಧೋಳ ತಾಲೂಕಾಸ್ಪತ್ರೆಗೆ ಸಚಿವ ತಿಮ್ಮಾಪುರ ದಿಢೀರ್ ಭೇಟಿ ಕೊಟ್ಟಿದ್ದಾರೆ. ರೋಗಿಗಳಿಗೆ ಸರಿಯಾಗಿ ಉಪಾಹಾರ ನೀಡದ ಬಗ್ಗೆ ದೂರು ಹಿನ್ನೆಲೆ ಬೆಳಗ್ಗೆ ದಿಢೀರ್? ಭೇಟಿ ನೀಡಿ ವೈದ್ಯರು, ಅಡುಗೆ ಸಿಬ್ಬಂದಿಗೆ ತರಾಟೆಗೆ ತೆಗೆದುಕೊಂಡರು. ರೋಗಿಗಳಿಗೆ, ಬಾಣಂತಿಯರಿಗೆ ಉತ್ತಮ ಆಹಾರ ನೀಡಬೇಕು. ರೋಗಿಗಳಿಗೆ ಸೂಕ್ತ ಚಿಕಿತ್ಸೆ ನೀಡುವಂತೆ ವೈದ್ಯರಿಗೂ ತರಾಟೆಗೆ ತೆಗೆದುಕೊಂಡರು. ಕಠಿಣ ಕ್ರಮದ ಎಚ್ಚರಿಕೆ ನೀಡಿದರು.

### ಬೆಂಬಲ ಬೆಲೆಗೆ ಕೊರಟಗೆರೆ ಬಂದ್

ಕೊಬ್ಬರಿಗೆ 25,000 ಬೆಂಬಲ ಬೆಲೆ ಆಗ್ರಹಿಸಿ ತುಮಕೂರು ಜಿಲ್ಲೆ ಕೊರಟಗೆರೆ ಪಟ್ಟಣ ಬಂದ್ ಮಾಡಿ ಪ್ರತಿಭಟನೆ ನಡೆಸಲಾಗುತ್ತಿದೆ. ಕರ್ನಾಟಕ ರಾಜ್ಯ ರೈತ ಸಂಘ, ಹಸಿರು ಸೇನೆಯಿಂದ ಬಂದ್ ಗೆ ಕರೆ ಕೊಡಲಾಗಿತ್ತು. ಅಂಗಡಿ ಮುಂಗಟ್ಟು ಮುಚ್ಚಿ ಬಂದ್ ಗೆ ವರ್ತಕರು ಬೆಂಬಲ ನೀಡಿದ್ದಾರೆ. ರೈತ ಸಂಘಟನೆಗಳಿಂದ ಪ್ರತಿಭಟನಾ ಜಾಥ ನಡೆಯುತ್ತಿದೆ. ಕ್ವಿಂಟಾಲ್ ಕೊಬ್ಬರಿಗೆ 25,000 ಬೆಂಬಲ ಘೋಷಿಸುವಂತೆ ರೈತರ ಆಗ್ರಹಿಸಿದ್ದಾರೆ. ತಹಶೀಲ್ದಾರ್ ಗೆ ಮನವಿ ಪತ್ರ ಸಲ್ಲಿಸಿದ್ದಾರೆ.

### ಸಿಎಂನ ಭೇಟಿಯಾದ ಸಚಿವ

ಗೃಹ ಸಚಿವ ಪರಮೇಶ್ವರ್ ಅವರು ಸಿಎಂ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿದ್ದಾರೆ. ಸಿಎಂ ಸರ್ಕಾರಿ ನಿವಾಸದಲ್ಲಿ ಭೇಟಿಯಾಗಿದ್ದಾರೆ. ಉಪೇಂದ್ರ ಮತ್ತು ಸಚಿವ ಎಸ್ ಮಲ್ಲಿಕಾರ್ಜುನ ಅವಹೇಳನಕರಿ ಹೇಳಿಕೆ ಸಂಬಂಧ ಸಿಎಂ ಜೊತೆ ಮಾಡ್ತೀನಿ ಎಂದು ಪರಮೇಶ್ವರ್ ತಿಳಿಸಿದರು.

### ಟೆನಿಸ್ ಆಡಿ ಗಮನ ಸೆಳೆದ ಶಾಸಕ

ನಂಜನಗೂಡು ತಾಲೂಕು ಟೆನಿಸ್ ಕ್ಲಬ್‌ನಲ್ಲಿ ಟೆನಿಸ್ ಆಡಿ ಶಾಸಕ ದರ್ಶನ್ ಆರ್ ಧ್ರುವನಾರಾಯಣ್ ಗಮನ ಸೆಳೆದಿದ್ದಾರೆ. ದರ್ಶನ್ ಟೆನಿಸ್ ಆಟದಿ ವಿಡಿಯೋ ವೈರಲ್ ಆಗಿದೆ. ನಿನ್ನೆ ಸ್ವಾತಂತ್ರ್ಯ ದಿನಾಚರಣೆಗೆ ಟೆನಿಸ್ ಕ್ಲಬ್‌ಗೆ ಭೇಟಿ ನೀಡಿದ್ದರು. ಈ ವೇಳೆ ಟೆನಿಸ್ ಆಡಿ ಗಮನ ಸೆಳೆದಿದ್ದಾರೆ. ದರ್ಶನ್ ಸರ್ವ್‌ಗೆ ಟೆನಿಸ್ ಪ್ರಿಯರು ಫಿದಾ ಆಗಿದ್ದಾರೆ. ದರ್ಶನ್ ಧ್ರುವನಾರಾಯಣ್ ಸುಮಾರು ಅರ್ಧ ಗಂಟೆ ಕಾಲ ಟೆನಿಸ್ ಆಡಿದರು.

### ಹೆಸ್ಕಾಂ ನೌಕರನ ಮೇಲೆ ಹಲ್ಲೆ

ಹುಬ್ಬಳ್ಳಿಯ ಮಹಾಲಕ್ಷ್ಮಿ ಬಡಾವಣೆಯಲ್ಲಿ ಕರೆಂಟ್ ಬಿಲ್ ಕೊಡಲು ಹೋದ ಹೆಸ್ಕಾಂ ನೌಕರನ ಮೇಲೆ ಹಲ್ಲೆ ನಡೆದಿದೆ. ವ್ಯಕ್ತಿಯೋರ್ವ ಕರೆಂಟ್ ಬಿಲ್ ಜಾಸ್ತಿ ಬಂದಿದ್ದಕ್ಕೆ ನೌಕರನ ಮೇಲೆ ಸಿಟ್ಟು ತೀರಿಸಿಕೊಂಡಿದ್ದಾನೆ. ಮಲ್ಲಯ್ಯ ಗಣಾಚಾರಿ ಎಂಬ ಹೆಸ್ಕಾಂ ಮೀಟರ್ ರೀಡರ್ ಮೇಲೆ ಅಬ್ದುಲ್ ಎಂಬ ವ್ಯಕ್ತಿ ಹಲ್ಲೆ ಮಾಡಿದ್ದಾನೆ.

### ಶೆಡ್‌ನಲ್ಲಿ 12 ಅಡಿ ಕಾಳಿಂಗ ಸರ್ಪ

ಶಿವಮೊಗ್ಗ ಹೊಸನಗರ ತಾಲೂಕಿನ ಪುರಮಠ ಗ್ರಾಮದ ಮನೆಯಲ್ಲಿ ಕಾಳಿಂಗ ಸರ್ಪ ಪ್ರತ್ಯಕ್ಷವಾಗಿದೆ. ಗೌರಮ್ಮ ಎಂಬ ಮಹಿಳೆಗೆ ಸೇರಿದ ಮನೆಯ ಕಾರ್ ಶೆಡ್?ನಲ್ಲಿ 12 ಅಡಿ ಉದ್ದದ ಕಾಳಿಂಗ ಸರ್ಪ ಪತ್ತೆಯಾಗಿದೆ. ಕಾಳಿಂಗ ಸರ್ಪವನ್ನು ನೋಡಿ ಕುಟುಂಬಸ್ಥರು ಭಯಭೀತರಾಗಿದ್ದಾರೆ. ಉರಗ ತಜ್ಞ ಬೆಳ್ಳೂರು ನಾಗರಾಜ್ ಕಾಳಿಂಗ ಸರ್ಪ ರಕ್ಷಣೆ ಮಾಡಿ ಕಾಡಿಗೆ ಬಿಟ್ಟಿದ್ದಾರೆ.

# ಬಿಜೆಪಿ ಜನಸಂಪರ್ಕ ಕಛೇರಿಯಲ್ಲಿ ಸ್ವಾತಂತ್ರ್ಯೋತ್ಸವ



**ದಾವಣಗೆರೆ :** 77ನೇ ಸ್ವಾತಂತ್ರ್ಯೋತ್ಸವವನ್ನು ಬಿಜೆಪಿ ಯುವ ಮುಖಂಡ ಜಿ.ಎಸ್. ಶ್ಯಾಮ್ ಅವರ ನೇತೃತ್ವದಲ್ಲಿ ಮಾಯಕೊಂಡ ವಿಧಾನಸಭಾ ಕ್ಷೇತ್ರದ ಬಿಜೆಪಿ ಜನಸಂಪರ್ಕ ಕಛೇರಿಯಲ್ಲಿ ಆಚರಿಸಲಾಯಿತು. ಮಾಯಕೊಂಡ ವಿಧಾನಸಭಾ ಕ್ಷೇತ್ರದ ಕೋಲ್ಕುಂಟೆ ಹಾಗೂ ದಿಂಡದಹಳ್ಳಿ ಗ್ರಾಮಗಳ ಶಾಲೆಗಳಲ್ಲಿನ 77ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಶಾಲಾ ಮಕ್ಕಳು, ಶಿಕ್ಷಕರು ಹಾಗೂ ಊರಿನ ಗ್ರಾಮಸ್ಥರ ಜೊತೆ ಧ್ವಜರೋಹಣಾ ಮೂಲಕ ಸಂಭ್ರಮದಿಂದ ಆಚರಿಸಲಾಯಿತು. ಈ ಸಂಭ್ರಮದಲ್ಲಿ ಜಿ.ಎಸ್. ಶ್ಯಾಮ್ ಸಾಕ್ಷಿಯಾದರು. ಈ ಸಂದರ್ಭದಲ್ಲಿ ಊರಿನ ಗ್ರಾಮಸ್ಥರು ಹಾಗೂ ಮುಖಂಡರುಗಳು ಪಾಲ್ಗೊಂಡಿದ್ದರು.

# ದಾವಣಗೆರೆ ಕಾರ್ಯಕರ್ತ ಪತ್ರಕರ್ತರ ಸಂಘದಲ್ಲಿ ಸ್ವಾತಂತ್ರ್ಯೋತ್ಸವ



ಜಿಲ್ಲಾ ಸಂಘದ ಅಧ್ಯಕ್ಷರಾದ ಇ.ಎಮ್ ಮಂಜುನಾಥ್ ಅವರು ಧ್ವಜಾರೋಹಣ ನೆರವೇರಿಸಿ ಮಾತನಾಡಿ, ಭಾರತದೇಶವು ಸ್ವತಂತ್ರ ಗೊಳಿಸಲು ಪತ್ರಿಕೆಗಳ ಪಾತ್ರ ಬಹಳ ಮಹತ್ವದ್ದಾಗಿದ್ದು ಅಂತಹ ಪವಿತ್ರವಾದ ವೃತ್ತಿಯನ್ನು ನಾವೆಲ್ಲರೂ ಮಾಡುತ್ತಿದ್ದು ನಮಗೆಲ್ಲರಿಗೂ ಹೆಮ್ಮೆಯ ವಿಷಯವಾಗಿದೆ ಎಂದರು. ಪ್ರಧಾನ ಕಾರ್ಯದರ್ಶಿ ಎ ಪಕ್ರುದ್ದೀನ್ ಮಾತನಾಡಿ, ಬ್ರಿಟಿಷರು ಅಳತ್ತಿದ್ದ ಭಾರತವನ್ನು ಬಿಡಿಸಿಕೊಳ್ಳಲು ಎಲ್ಲರೂ ಸಂಘಟಿತರಾಗಿ ಹೋರಾಟ ಮಾಡಿದ ಪರಿಣಾಮವಾಗಿ ಇವತ್ತಿನ ದಿನ ನಾವು ಸ್ವತಂತ್ರವಾಗಿ ಬದುಕುತ್ತಿದ್ದೇವೆ ಈ ದೇಶವನ್ನು ಸ್ವತಂತ್ರಗೊಳಿಸಲು ದೇಶದ ಸೇನಾನಿಗಳು ಬಲಿಯಾಗಿದ್ದಾರೆ ಅವರೆಲ್ಲರನ್ನು ಸ್ಮರಿಸುತ್ತಾ ದೇಶವು ಸದೃಢವಾಗಿರಬೇಕಾದರೆ ಸಂವಿಧಾನದ ನಾಲ್ಕನೇ ಅಂಗವಾದ ಪತ್ರಿಕರಂಗ ಸದೃಢವಾಗಿರಬೇಕು ಪತ್ರಕರ್ತರು ತಮ್ಮ ಆರೋಗ್ಯದ ಕಡೆ ಗಮನಹರಿಸಬೇಕು. ಪತ್ರಕರ್ತರ ಎಲ್ಲರೂ ಸಂಘಟಿತರಾಗಬೇಕು ಎಂದು ಹೇಳಿದರು.

ಜಿಲ್ಲಾ ಖಜಾಂಚಿ ಎನ್‌ವಿ ಬದ್ರಿನಾಥ್, ಉಪಾಧ್ಯಕ್ಷರಾದ ಎಚ್.ಎನ್ ಪ್ರಕಾಶ್, ಆರ್. ಎಸ್.ತಿಪ್ಪೇಸ್ವಾಮಿ, ಕಾರ್ಯದರ್ಶಿಗಳಾದ ಬಿ. ಚೆನ್ನವೀರಯ್ಯ , ನಿಂಗೋಜಿರಾವ್, ನಿರ್ದೇಶಕರಾದ ಎಚ್.ಚಂದ್ರಶೇಖರ್, ಎಂ ಗುರುಮೂರ್ತಿ, ಕೆ.ಸಿ. ಮಂಜುನಾಥ್, ಬಿ.ಎಸ್. ಮುದ್ದಯ್ಯ , ವೇದಮೂರ್ತಿ, ಇಂಧೂದರ, ಶಿವಮೂರ್ತಿ, ಶಿವಕುಮಾರ್ , ಮಂಜುನಾಥ ಕಾಡಜ್ಜಿ, ಎ.ಎನ್ ನಿಂಗಪ್ಪ, ವಸಂತಕುಮಾರ್, ಸೋಮಶೇಖರ ಇತರರು ಇದ್ದರು.

# ಭಾರತೀಯತ ಸ್ವಾಭಿಮಾನದ ಸಂಕೇತವೇ ಸ್ವಾತಂತ್ರ್ಯೋತ್ಸವ



**ಚಳ್ಳಕೆರೆ:** ವಿಶ್ವದಲ್ಲಿಯೇ ಪ್ರಜಾಪ್ರಭುತ್ವವನ್ನು ಪೂರ್ಣಪ್ರಮಾಣದಲ್ಲಿ ಅಳವಡಿಸಿಕೊಂಡು ರಾಷ್ಟ್ರವೆಂದು ಖ್ಯಾತಿಯಾದ ಭಾರತ ದೇಶದ 76ನೇ ಸ್ವಾತಂತ್ರ್ಯ ದಿನ ನಮ್ಮೆಲ್ಲರಿಗೂ ಹೆಮ್ಮೆ ತಂದಿದೆ. ನಮ್ಮ ಮೇಲೆ ನಿರಂತರ ಆಡಳಿತ ನಡೆಸಿ ನಮ್ಮನ್ನು ದಾಸ್ಯತನದಿಂದ ನೋಡುತ್ತಿದ್ದ ಬಿಟ್ರಿಷರಿಗೆ ಬುದ್ದಿ ಕಲಿಸಿ ಅಹಿಂಸ ಮಾರ್ಗದ ಮೂಲಕ ಸ್ವಾತಂತ್ರ್ಯವನ್ನು ಪಡೆಯಲಾಯಿತು.

ಮಹಾತ್ಮ ಗಾಂಧೀಜಿ ಸೇರಿದಂತೆ ಹಲವಾರು ಧೀಮಂತ ವ್ಯಕ್ತಿಗಳ ಹೋರಾಟ ಇದರಲ್ಲಿ ಅಡಗಿದೆ. ಸ್ವಾತಂತ್ರ್ಯೋತ್ಸವ ಭಾರತೀಯರ ಸ್ವಾಭಿಮಾನದ ಸಂಕೇತವಾಗಿದೆ ಎಂದು ನಾಯಕನಹಟ್ಟಿ ಮಂಡಲದ ಅಧ್ಯಕ್ಷ ಈ.ರಾಮರೆಡ್ಡಿ ತಿಳಿಸಿದರು.

ಗ್ರಾಮದ ಬಿಜೆಪಿ ಕಚೇರಿಯಲ್ಲಿ ಆಯೋಜಿಸಿದ್ದ ಸ್ವಾತಂತ್ರ್ಯ ದಿನಾಚರಣೆ ಧ್ವಜಾರೋಹಣ ನೆರವೇರಿಸಿ ಮಾತನಾಡಿದರು.

ಭಾರತವನ್ನು ವೈಭವದ ಸ್ಥಿತಿಯತ್ತ ತೆ–ಗೆದುಕೊಂಡು ಹೋಗಲು ಎಲ್ಲರ ಸಹಕಾರ ಅಗತ್ಯವಿದೆ. ನೂರಾರು ವರ್ಗ, ಭಾಷೆಗಳ ಜನರು ನಾವೆಲ್ಲರೂ ಒಂದೇ ಎಂಬ ಭಾವನೆಯಿಂದ ಬದುಕನ್ನು ಹಂಚಿಕೊಂಡ ಪುಣ್ಯ ನೆಲವೆಂದರೆ ಅದು ಭಾರತ ಎಂದರು.

ಬಿಜೆಪಿ ಜಿಲ್ಲಾ ಎಸ್ಟಿ ಮೋರ್ಚಾ ಅಧ್ಯಕ್ಷ ಶಿವಣ್ಣ ಮಾತನಾಡಿ, ಸ್ವಾತಂತ್ರ್ಯ ಪಡೆಯಲು ಹಲವಾರು ವರ್ಷಗಳ ಕಾಲ ದೇಶದ ವಿವಿಧೆಡೆ ಭಾರಿ ದೊಡ್ಡ ಪ್ರಮಾಣದಲ್ಲಿ ಹೋರಾಟ ನಡೆದವು. ಸ್ವಾತಂತ್ರ ?ಯ ಸಂಗ್ರಾಮ ಹೆಸರಿನಲ್ಲಿ ಸಾವಿರಾರು ಮುಗ್ಧ ಜನರು ಸ್ವಾತಂತ್ರ್ಯಕ್ಕಾಗಿ ಪ್ರಾಣ ತ್ಯಾಗ ಮಾಡಿದ್ದಾರೆ. ದೇಶದ ಭವಿಷ್ಯವನ್ನು ಉತ್ತಮ ಪಡಿಸುವ ಜವಾಬ್ದಾರಿ ಎಲ್ಲರ ಮೇಲಿದೆ ಎಂದರು.

ಬಿಜೆಪಿ ಹಿರಿಯ ಮುಖಂಡ ಎಂವೈಟಿ ಸ್ವಾಮಿ, ಮಂಡಲ ಪ್ರಧಾನ ಕಾರ್ಯದರ್ಶಿ ಚನ್ನಗಾನಹಳ್ಳಿ ಮಲ್ಲೇಶ್, ಬೆಂಕಿಗೋವಿಂದಪ್ಪ, ಓಬಣ್ಣ, ಯುವ ಮೋರ್ಚಾ ಅಧ್ಯಕ್ಷ ವಿಷ್ಣು, ನಗರ ಘಟಕದ ಅಧ್ಯಕ್ಷ ರಾಜು, ಬೋಸಯ್ಯ, ಬೋರಯ್ಯ, ತಾರಕೇಶ್ ಮುಂತಾದವರು ಉಪಸ್ಥಿತರಿದ್ದರು.

# ಜನಜಾಗೃತಿ ಸಪ್ತಾಹದಲ್ಲಿ ಟಿಹೆಚ್‌ಒ ಡಾ.ಬಿ.ವಿ.ಗಿರೀಶ್



**ಚಿತ್ರದುರ್ಗ :** ಸ್ವಚ್ಛವಾದ ಕೈಗಳು, ಶುದ್ಧ ಕುಡಿಯುವ ನೀರು ಹಲವಾರು ಸಾಂಕ್ರಾಮಿಕ ರೋಗಗಳಿಂದ ನಿಮ್ಮನ್ನು ರಕ್ಷಿಸುತ್ತದೆ. ಪರಿಸರ ನೈರ್ಮಲ್ಯದಿಂದ ರೋಗಗಳನ್ನು ತಡೆಗಟ್ಟಬಹುದು ಎಂದು ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ಹೇಳಿದರು.

ಚಿತ್ರದುರ್ಗ ನಗರದ ವಾರ್ಡ್ ನಂ 17ರ ಆಶ್ರಯ ಬಡಾವಣೆಯ ಸುತ್ತಮುತ್ತ ಜಿಲ್ಲಾಧಿಕಾರಿಗಳ ನಿರ್ದೇಶನದಂತೆ ತಾಲ್ಲೂಕು ಆರೋಗ್ಯಾಧಿಕಾರಿಗಳ ತಂಡದಿಂದ ಬುಧವಾರ ಆಶ್ರಯ ಬಡಾವಣೆಯ ಎಲ್ಲಾ ರಸ್ತೆಗಳಲ್ಲಿ ಸಂಚರಿಸಿ ಜಾಗೃತಿ ಜಾಥಾ ನಡೆಸಿ, ಶಾಲೆ ಮತ್ತು ಅಂಗನವಾಡಿಗಳಲ್ಲಿ ಶುಚಿತ್ವ, ಶುದ್ಧ ನೀರಿನ ಉಪಯೋಗದ ಬಗ್ಗೆ ಮಾಹಿತಿ ಕರಪತ್ರಗಳನ್ನೂ ವಿತರಿಸಿ ನಂತರ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ಆವರಣದಲ್ಲಿ ಸಾರ್ವಜನಿಕರಿಗೆ ಶಾಲಾ ಶಿಕ್ಷಕರಿಗೆ, ಮಕ್ಕಳಿಗೆ ಎಸ್‌ಡಿಎಂಸಿ ಸದಸ್ಯರಿಗೆ ಸಭೆ ನಡೆಸಿ ಅವರು ಮಾತನಾಡಿದರು.

ಶುದ್ಧವಾದ ಕುಡಿಯುವ ನೀರಿನ ಉಪಯೋಗದಿಂದ ರೋಗಗಳನ್ನು ನಿಯಂತ್ರಿಸಬಹುದು. ಕಲುಷಿತ ನೀರಿನ ಸೇವನೆಯಿಂದ ಕರುಳು ಬೇನೆ, ಕಾಲರಾ, ಟೈಫಾಯ್ಡ್ ಕಾಮಾಲೆ ಇನ್ನಿತರೆ ಸಾಂಕ್ರಾಮಿಕ ರೋಗಗಳು ಹರಡುತ್ತವೆ. ಸ್ವಚ್ಛವಾದ ಕೈಗಳು, ಶುದ್ಧ ಕುಡಿಯುವ ನೀರು ಹಲವಾರು ಸಾಂಕ್ರಾಮಿಕ ರೋಗಗಳಿಂದ ನಿಮ್ಮನ್ನು ರಕ್ಷಿಸುತ್ತದೆ ಎಂದರು.

ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ್ ಮಾತನಾಡಿ, ಜನರು ಆತಂಕ ಭಯಪಡುವುದು ಬೇಡ. ಶುದ್ಧವಾದ ನೀರು, ಆಹಾರ ಸೇವನೆ ಮಾಡಿ. ತೆರೆದಿಟ್ಟ ಆಹಾರ ಪದಾರ್ಥಗಳನ್ನು ಹಣ್ಣುಗಳನ್ನು ತಿನ್ನುವುದು ಬೇಡ. ಮನೆಯ ಸುತ್ತಮುತ್ತಲಿನ ವಾತಾವರಣ ಪರಿಸರ ನೈರ್ಮಲ್ಯ ಕಾಪಾಡಿಕೊಳ್ಳಿ ಎಂದರು.

ಬಯಲು ಮಲವಿಸರ್ಜನೆ ಮಾಡದೆ ಶೌಚಾಲಯ ಬಳಕೆ ಮಾಡಿ. ಆಹಾರ ಪದಾರ್ಥಗಳನ್ನು ನೊಣಗಳಿಂದ ಸಂರಕ್ಷಣೆ ಮಾಡಿಕೊಳ್ಳಿ. ಮೆದು ಆಹಾರ, ಆಹಾರ ಗಂಜಿ, ಮಜ್ಜಿಗೆ, ಎಳನೀರು ಹೇರಳವಾಗಿ ಸೇವನೆ ಮಾಡಿ ತಮ್ಮ ಮತ್ತು ಇತರರ ಆರೋಗ್ಯ ಕಾಪಾಡುವಲ್ಲಿ ಜವಾಬ್ದಾರಿ ವಹಿಸುವುದು ಪ್ರತಿಯೊಬ್ಬರ ಕರ್ತವ್ಯ ಎಂದರು.

ಆರೋಗ್ಯ ನಿರೀಕ್ಷಣಾಧಿಕಾರಿ ಗಂಗಾಧರ್ ರೆಡ್ಡಿ ಅವರು ಮಕ್ಕಳಿಗೆ, ಶಾಲಾ ಶಿಕ್ಷಕರಿಗೆ, ಎಸ್‌ಡಿಎಂಸಿ ಸದಸ್ಯರಿಗೆ ಕೈ ತೊಳೆಯುವ ವಿಧಾನದ ಬಗ್ಗೆ ಪ್ರಾತ್ಯಕ್ಷಿಕೆ ನೀಡಿದರು.

ಜನಜಾಗೃತಿ ಸಪ್ತಾಹದಲ್ಲಿ ಮಾರುತಿ ನಗರದ ವೈದ್ಯಾಧಿಕಾರಿ ಡಾ. ಯಶಸ್, ಆರೋಗ್ಯ ನಿರೀಕ್ಷಣಾಧಿಕಾರಿ ರಂಗಾ–ರೆಡ್ಡಿ, ಶ್ರೀಧರ್, ಮಧುಸೂದನ್, ಹಿರಿಯ ಆರೋಗ್ಯ ಸುರಕ್ಷತಾ ಅಧಿಕಾರಿ ತಿಪ್ಪಮ್ಮ, ಮಾರುತಿ ನಗರ ಆರೋಗ್ಯ ಕೇಂದ್ರದ ಎಲ್ಲಾ ಆರೋಗ್ಯ ಸುರಕ್ಷತಾ ಅಧಿಕಾರಿಗಳು, ಆಶಾ ಕಾರ್ಯಕರ್ತೆಯರು, ಅಂಗನವಾಡಿ ಶಿಕ್ಷಕಿಯರು, ಶಾಲಾ ಶಿಕ್ಷಕರಾದ ರುದ್ರಪ್ಪ, ನಿರ್ಮಲ ಉಪಸ್ಥಿತರಿದ್ದರು.



**ಚಿತ್ರದುರ್ಗ:** ಚಿತ್ರದುರ್ಗ ನಗರದ ವಿ.ಪಿ.ಬಡವಾಣೆಯ ಮುಖ್ಯ ರಸ್ತೆಯಲ್ಲಿರುವ ಕೀರ್ತಿ ಆಸ್ಪತ್ರೆಯಲ್ಲಿ ಡಾ.ಬಿ.ಮಲ್ಲಿಕಾರ್ಜುನ ಕೀರ್ತಿ ಅವರು ಧ್ವಜಾರೋಹಣ ನೆರವೇರಿಸಿದರು. ಈ ಸಂದರ್ಭದಲ್ಲಿ ಕೀರ್ತಿ ಆಸ್ಪತ್ರೆಯ ಸಿಬ್ಬಂದಗಳು ಭಾಗವಹಿಸಿ ಸ್ವಾತಂತ್ರ್ಯ ದಿನದ ಸಂಭ್ರಮದಲ್ಲಿ ಭಾಗವಹಿಸಿದರು.

# ವಿಶ್ವಮಾನವ ಶಾಲೆಯಲ್ಲಿ ಸಡಗರದ ಸ್ವಾತಂತ್ರ್ಯೋತ್ಸವ



**ಚಿತ್ರದುರ್ಗ :** ನಗರದ ಹೊರವಲಯದ ವಿಶ್ವಮಾನವ ಸಾಂಸ್ಕೃತಿಕ ಮತ್ತು ವಿದ್ಯಾಸಂಸ್ಥೆಯಲ್ಲಿ 77ನೇ ಸ್ವಾತಂತ್ರ್ಯ ದಿನಾಚರಣೆಯ ಕಾರ್ಯಕ್ರಮವನ್ನು ಅದ್ದೂರಿಯಾಗಿ ಸಡಗರದಿಂದ ಆಚರಿಸಲಾಯಿತು. ಸಂಸ್ಥೆಯ ಅಧ್ಯಕ್ಷರಾದ ಟಿ.ಹೆಚ್.ಬುಡೇನ್ ಸಾಬ್ ರವರು ಧ್ವಜಾರೋಹಣ ಕಾರ್ಯಕ್ರಮವನ್ನು ನೆರವೇರಿಸಿದರು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಕಾರ್ಯದರ್ಶಿ ಎಂ.ನೀಲಕಂಠದೇವರು, ಸದಸ್ಯರಾದ ಮೌಲಾನ್ ಸಾಬ್, ಪ್ರಾಂಶುಪಾಲರಾದ .ಹೆಚ್.ಆರ್.ಸುಧಾ, ಮುಖ್ಯೋಪಾಧ್ಯಾಯ. ಜಿ.ಆರ್, ಚನ್ನಬಸಪ್ಪ, .ಬಿ.ಜಿ.ಶಿವರುದ್ರಯ್ಯ ಉಪಸ್ಥಿತರಿದ್ದರು. ಈ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಂದ ಪಥ ಸಂಚಲನ ಕಾರ್ಯಕ್ರಮ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳಾದ ನೃತ್ಯ, ಭಾಷಣ, ಪಿರಮಿಡ್ ರಚನೆ, ವೇಷಭೂಷಣ ಇನ್ನಿತರೆ ಚಟುವಟಿಕೆಗಳನ್ನು ಆಯೋಜಿಸಲಾಗಿತ್ತು.

ಫಾಸ್ಟ್ ನ್ಯೂಸ್

## ವಿಜ್ಞಾನ ರಸಪ್ರಶ್ನೆ ಸ್ಪರ್ಧೆ

ಬೆಂಗಳೂರಿನ ಜವಾಹರ್ ಲಾಲ್ ನೆಹರು ತಾರಾಲಯವು ಪ್ರೌಢಶಾಲಾ 8,9ಮತ್ತು 10 ನೇ ತರಗತಿ ವಿದ್ಯಾರ್ಥಿಗಳಿಗೆ ಕನ್ನಡದಲ್ಲಿ ರಾಜ್ಯ ಮಟ್ಟದ ವಿಜ್ಞಾನ ರಸಪ್ರಶ್ನೆ ಸ್ಪರ್ಧೆ ಏರ್ಪಡಿಸಿದೆ. ಸೆಪ್ಟೆಂಬರ್ 2 ಮತ್ತು 3 ರಂದು ಪ್ರವೇಶ ಪರೀಕ್ಷೆ ನಡೆಸಲಾಗುತ್ತದೆ. ಪ್ರವೇಶ ಉಚಿತವಾಗಿದ್ದು, ನೋಂದಾಯಿಸಲು ಇದೇ ಆಗಸ್ಟ್ 30 ಕೊನೆಯ ದಿನ. ಪ್ರಥಮ ಬಹುಮಾನ ರೂ.10000, ದ್ವಿತೀಯ ಬಹುಮಾನ ರೂ.7500, ಹಾಗೂ ತೃತೀಯ ಬಹುಮಾನ ತಲಾ ಇಬ್ಬರಿಗೆ ರೂ.5000 ಕೊಡಲಾಗುವುದು. ಅರ್ಹತೆ ಗಳಿಸಿದವರಿಗೆ ಇ–ಪ್ರಶಂಸಾ ಪತ್ರ ವಿತರಿಸಲಾಗುವುದು. ಸಂಪರ್ಕಿಸಲು 080–22379725 ಹಾಗೂ ೨ಟಿಜಿಂ@ಣಚಿಡಿಚಿಟಚಿಥಿಚಿ. ಅಡಿಂ ಎಂದು ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತಿನ ರಾಜ್ಯ ಸಮಿತಿ ಸದಸ್ಯರಾದ ಎಚ್.ಎಸ್.ಟಿ. ಸ್ವಾಮಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 30 ಲಕ್ಷ ಹಣ ಪೀಕಿದ ಹನಿಟ್ರಾಪ್ ಗ್ಯಾಂಗ್

**ಬೆಂಗಳೂರು :** ಬೆಂಗಳೂರಿನ ನಿವೃತ್ತ ಸರ್ಕಾರಿ ನೌಕರ ಸಿಧೀಂದ್ರ ಎಂಬುವರಿಗೆ ಹನಿಟ್ರಾಪ್ ಮಾಡಿ ಹಣ ವಸೂಲಿ ಪ್ರಕರಣ ಬೆನ್ನಲ್ಲೇ ಇದೀಗ ಬೆಂಗಳೂರಿನಲ್ಲಿ ಮತ್ತೊಂದು ಹನಿಟ್ರ್ಯಾಪ್ ಗ್ಯಾಂಗ್ ಸಿಕ್ಕಿಬಿದ್ದಿದೆ. ತನ್ನ ರಂಗಿನಾಟದೊಂದಿಗೆ ವಂಚಿಸುತ್ತಿದ್ದ ಮುಂಬೈ ಮಾಡೆಲ್ ಲಾಕ್ ಆಗಿದ್ದಾಳೆ. ಗಂಡಸರನ್ನ ಮನೆಗೆ ಬರಲು ಹೇಳಿ ಬಿಕಿನಿಯಲ್ಲಿ ಸ್ವಾಗತಿಸುತ್ತಿದ್ದ ನೇಹಾ ಅಲಿಯಾಸ್ ಮೆಹರ್ ಎನ್ನುವಾಕೆ ಇದೀಗ ಬೆಂಗಳೂರಿನ ಪುಟ್ಟೇನಹಳ್ಳಿ ಪೊಲೀಸರ ಅತಿಥಿಯಾಗಿದ್ದಾಳೆ. ಟೆಲಿಗ್ರಾಮ್ ಹಾಗೂ ಮನೆಗೆ ಕರೆಯಿಸಿಕೊಂಡು ರಂಗಿನಾಟದ ಹಸಿ ಬಿಸಿ ದೃಶ್ಯ ಸೆರೆ ಹಿಡಿದು ಹಣಕ್ಕಾಗಿ ಬ್ಲ್ಯಾಕ್ ಮೇಲ್ ಮಾಡುತ್ತಿದ್ದ ನೇಹಾ ಅಲಿಯಾಸ್ ಮೆಹರ್ ಎನ್ನುವಾಕೆಯನ್ನು ಪೊಲೀಸರು ಮುಂಬೈನಲ್ಲಿ ಬಂಧಿಸಿ ಬೆಂಗಳೂರಿಗೆ ಕರೆದು ತಂದಿದ್ದು, ತನಿಖೆ ವೇಳೆ ಮಾಡೆಲ್ ನೇಹಾಳ ಒಂದೊಂದೇ ರಂಗಿನಾಟ ಬಟಾಬಯಲಾಗಿವೆ. 12ಕ್ಕೂ ಹೆಚ್ಚು ಜನರಿಗೆ ಹನಿಟ್ರ್ಯಾಪ್ ಮಾಡುವ ಮೂಲಕ ಒಟ್ಟು 30 ಲಕ್ಷಕ್ಕೂ ಹೆಚ್ಚು ಹಣ ಪೀಕಿದ್ದಾರೆ ಎಂದು ತನಿಖೆ ವೇಳೆ ಗೊತ್ತಾಗಿದೆ.

## ಟ್ರ್ಯಾಕ್ಟರ್ ನಿಂದ ರೂಟರ್ ಹೊಡೆದು ನಾಶ

ಮೆಕ್ಕೆಜೋಳಕ್ಕೆ ಕೊಳೆ ರೋಗ ಹಿನ್ನಲೆ ಮೆಕ್ಕೆಜೋಳದ ಬೆಳೆಯನ್ನ ಟ್ರ್ಯಾಕ್ಟರ್ ನಿಂದ ರೂಟರ್ ಹೊಡೆದು ನಾಶ ಮಾಡಲಾಗುತ್ತಿದೆ. ಹಾವೇರಿ ತಾಲೂಕಿನ ಕರ್ಜಗಿ ಗ್ರಾಮದ ನಾಗಪ್ಪ ಗೊಬ್ಬರಗುಂಪಿ ಎಂಬುವ ರೈತ 10 ಎಕರೆಯಲ್ಲಿ ಮೆಕ್ಕೆಜೋಳ ಬೆಳೆದಿದ್ದ. ಒಂದೂವರೆ ಲಕ್ಷ ರೂಪಾಯಿ ಖರ್ಚು ಮಾಡಿ ಬೆಳೆ ಬೆಳೆದಿದ್ದ. ಆದ್ರೆ ಕೊಳೆ ರೋಗ ಹಿನ್ನಲೆ ಟ್ರಾಕ್ಟರ್ ನಿಂದ ಬೆಳೆ ಸಂಪೂರ್ಣ ನಾಶ ಮಾಡಿದ್ದಾರೆ. ಕಳೆದ ತಿಂಗಳು ನಿರಂತರ ಮಳೆಗೆ ಮೆಕ್ಕೆಜೋಳಕ್ಕೆ ಲದ್ದಿರೋಗ, ಕೊಳೆ ರೋಗ ಕಾಣಿಸಿಕೊಂಡಿತ್ತು.

## ಕುಡಿದ ಮತ್ತಿನಲ್ಲಿ ಸ್ನೇಹಿತನನ್ನೇ ಕೊಂದ

ರಾಯಚೂರು ಜಿಲ್ಲೆ ಲಿಂಗಸುಗೂರು ತಾಲ್ಲೂಕಿನ ನಾಗರಾಳ ಗ್ರಾಮದಲ್ಲಿ ಕೊಲೆ ನಡೆದಿದೆ. ಕುಡಿದ ಮತ್ತಿನಲ್ಲಿ ಸ್ನೇಹಿತನನ್ನೇ ಯುವಕ ಕೊಂದಿದ್ದಾನೆ. ನಿನ್ನೆ ರಾತ್ರಿ ಕುಡಿದ ಮತ್ತಲ್ಲಿ ಸ್ನೇಹಿತರ ನಡುವೆ ಕ್ಷುಲ್ಲಕ ಕಾರಣಕ್ಕೆ ಜಗಳ ನಡೆದಿದ್ದು ನೈಟ್ ಪ್ಯಾಂಟ್ ನ ಲೇಸ್ ನಿಂದ ಕುತ್ತಿಗೆಗೆ ಬಿಗಿದು ಸ್ನೇಹಿತನ ಕೊಲೆ ಮಾಡಲಾಗಿದೆ. ರವಿಕುಮಾರ (33) ಕೊಲೆಯಾದ ಯುವಕ. ಪವನ ಕುಮಾರ್ ಕೊಲೆ ಮಾಡಿದ ಯುವಕ.

# ನಾಗರೀಕರು ಉತ್ತಮ ಸಮಾಜ ನಿರ್ಮಾಣಕ್ಕೆ ಶ್ರಮಿಸಬೇಕು : ಎನ್. ವೈ. ಗೋಪಾಲಕೃಷ್ಣ



**ಮೊಳಕಾಲ್ಮುರು :** ನಿಮ್ಮನ್ನು ನೀವು ಅರ್ಥ ಮಾಡಿಕೊಂಡು ಸಾರ್ಥಕ ಜೀವನ ರೂಪಿಸಿಕೊಂಡು ಸಮಾಜದಲ್ಲಿ ಗೌರವಯುತ ಬದುಕು ನಡೆಸುವಂತಾಗಬೇಕು ಮತ್ತು ಶಾಂತಿ ನೆಮ್ಮದಿಯ ಉತ್ತಮ ಸಮಾಜ ನಿರ್ಮಾಣ ಪ್ರತಿಯೊಬ್ಬ ನಾಗರಿಕನ ಆದ್ಯ ಕರ್ತವ್ಯ ವಾಗಬೇಕು ಅಂತಹ ಮಹತ್ತರ ಕರ್ತವ್ಯ ಪ್ರತಿಯೊಬ್ಬ ನಾಗರಿಕನ ಹೆಮ್ಮೆಯ ಬದುಕಾಗಬೇಕು ಎಂದು ಶಾಸಕರಾದ ಎನ್. ವೈ. ಗೋಪಾಲಕೃಷ್ಣ ಕರೆ ನೀಡಿದರು.

ಮೊಳಕಾಲ್ಮುರು ಪಟ್ಟಣದ ಸರ್ಕಾರಿ ಪದವಿ ಪೂರ್ವ ಕಾಲೇಜ್ ಹಿಂಭಾಗದಲ್ಲಿ ತಾಲ್ಲೂಕು ಆಡಳಿತದ ವತಿಯಿಂದ ಹಮ್ಮಿಕೊಳ್ಳಲಾಗಿದ್ದ 77ನೇ ಸ್ವಾತಂತ್ರ ದಿನಾಚರಣೆ ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿ ಸಾರ್ವಜನಿಕರನ್ನು ಉದ್ದೇಶಿಸಿ ಮಾತನಾಡಿದರು

ಅತ್ಯಂತ ಹಿಂದುಳಿದ ತಾಲ್ಲೂಕಿನ ಸಮಗ್ರ ಅಭಿವೃದ್ಧಿಗಾಗಿ ಪ್ರತಿ ಗ್ರಾಮದಲ್ಲಿ ಶಾಲೆಯನ್ನು ಪ್ರಾರಂಭಿಸಿ ಪ್ರತಿಯೊಬ್ಬ ಮಗುವು ಉತ್ತಮ ಶಿಕ್ಷಣ ಕಳೆಯಬೇಕು ಉತ್ತಮ ಸಮಾಜ ನಿರ್ಮಾಣಕ್ಕೆ ಶಿಕ್ಷಣವೆ ಪ್ರಮುಖ ಸಾಧನ ಆದ್ದರಿಂದ ಯಾವೊಬ್ಬ ಮಗುವು ಶಿಕ್ಷಣದಿಂದ ವಂಚಿತವಾಗಬಾರದು ಎಂಬ ಸಧುದ್ದೇಶದಿಂದ ಪ್ರತಿ ಗ್ರಾಮದಲ್ಲಿ ಶಾಲೆಯನ್ನು ಪ್ರಾರಂಭಿಸುವುದು ನಮ್ಮ ಪ್ರಮುಖ ಗುರಿಯಾಗಿದೆ ಎಂದು ತಿಳಿಸಿದರು

ನಾವು ನಮ್ಮ ಜೀವನವನ್ನು ಸ್ವಾರ್ಥಕ್ಕಾಗಿ ಬಳಸಿ ಕೊಳ್ಳದೇ, ಸಮಾಜಕ್ಕೆ ಪೂರಕವಾಗಿ ಸಮಾಜದ ದುಡಿಮೆಗಾಗಿ ಸಮಾಜದ ಅಭಿವೃದ್ಧಿಗಾಗಿ ನಿಸ್ವಾರ್ಥಕ ಸೇವೆ ಮಾಡಿದರೆ ಮಾತ್ರ ಜೀವನ ಸಾರ್ಥಕವಾಗುತ್ತದೆ. ಇಂತಹ ಕಾರ್ಯಕ್ರಮದಲ್ಲಿ ಇಲ್ಲಿ ಶಿಕ್ಷಕರು ಮಾದರಿ ಕಾರ್ಯಕ್ರಮಗಳನ್ನು ಮಾಡಿ ದೇಶಾಭಿಮಾನ ತೋರಿಸುತ್ತಿದ್ದಾರೆ ಆದರೆ ಅದು ಪ್ರತಿಯೊಂದು ಪೋಷಕರು ಮತ್ತು ನಾಗರೀಕರಲ್ಲಿ ಆ ಸಂಸ್ಕೃತಿ ಸಂಸ್ಕಾರ ಬರಬೇಕು.ಎಂದು ಹೇಳಿದರು

ಹತ್ತು ವರ್ಷಗಳ ಹಿಂದೆ ಈ ಕ್ಷೇತ್ರ ಬಿಟ್ಟು ಹೋಗಿದ್ದೆ ಆದರೆ ನಾನು ನನ್ನ ಸ್ವಕ್ಷೇತ್ರದ ಅಭಿವೃದ್ಧಿಗಾಗಿ ಸ್ವಂತ ತಾಲ್ಲೂಕು ಮತ್ತು ಜಿಲ್ಲೆಯ ಅಭಿವೃದ್ಧಿಗಾಗಿ ನಾನು ಸೇವೆ ಸಲ್ಲಿಸಬೇಕು ಕ್ಷೇತ್ರ ಮತ್ತು ಜಿಲ್ಲೆಯ ಅಭಿವೃದ್ಧಿ ತರುವುದು ನಮ್ಮ ಅಧ್ಯ ಕರ್ತವ್ಯವಾಗಿದೆ ಬದಲಾವಣೆ ತರಲು ನಿಮ್ಮೆಲ್ಲರ ಸಹಕಾರ ಬಹಳ ಮುಖ್ಯವಾಗುತ್ತದೆ.ಎಂದು ತಿಳಿಸಿದರು

ನಾಡಿಗೋಸ್ಕರ ಅಂದು ಸಾಕಷ್ಟು ನಾಯಕರು ತಮ್ಮ ಪ್ರಾಣ ತ್ಯಾಗ ಮಾಡಿದ್ದಾರೆ. ಆದರೆ ಅವರ ನಾಮಗಳನ್ನು ಜಪ ಮಾಡದೆ ಸಮಾಜಕ್ಕೆ ಕಂಟಕವಾಗದೆ ಸಾರ್ಥಕ ಕೆಲಸಗಳನ್ನು ಮಾಡಿ ದೇಶಕ್ಕೆ ಕೀರ್ತಿ ತರುವ ಕೆಲಸ ಮಾಡಬೇಕು. ಈ ಕಾರ್ಯಕ್ರಮ ಮಾಡಲು ಇಂದು ತಹಸೀಲ್ದಾರ್ ಎಂ ವಿ ರೂಪ ರವರು ಬಹಳ ಶ್ರಮವಹಿಸಿ ಕಾರ್ಯಕ್ರಮವನ್ನು ಆಯೋಜನೆ ಮಾಡಿದ್ದಾರೆ. ಈ ಕಾರ್ಯಕ್ರಮ ಮಾಡಲು ಜಾಗ ಇಲ್ಲದ ಕಾರಣ ಎಲ್ಲಿ ಕಾರ್ಯಕ್ರಮಕ್ಕೆ ತೊಂದರೆ ಆಗುತ್ತದೆ ಎಂದು ಭಾವಿಸಿದ್ದೆ ಆದರೆ ಅದರ ಕೊರತೆ ಇಲ್ಲದೇ ನಮ್ಮ ಊಹೆಗೆ ನಿಲುಕತೆ ಈ ಕಾರ್ಯಕ್ರಮವನ್ನು ಯಶಸ್ವಿಯಾಗಿ ತಹಸೀಲ್ದಾರ್ ಮೇಡಂ ಮಾಡಿದ್ದಾರೆ ಎಂದ–ರೆ ತುಂಬಾ ಸಂತೋಷವಾಗುತ್ತದೆ.ಎಂದು ಮೆಚ್ಚುಗೆ ವ್ಯಕ್ತಪಡಿಸಿದರು

ಕಾರ್ಯಕ್ರಮದಲ್ಲಿ ತಹಸೀಲ್ದಾರ್ ಎಂ ವಿ ರೂಪ ಮಾತನಾಡಿ ಬ್ರಿಟಿಷರ ಕಪಿ ಮುಷ್ಠಿಯಿಂದ ಭಾರತ ದೇಶವನ್ನು ಬಿಡುಗಡೆ ಮಾಡಿದ ಸುದಿನವಾಗಿದ್ದು ಪ್ರತಿಯೊಬ್ಬ ಭಾರತ ದೇಶದ ನಾಗರೀಕರು ಆತ್ಮ ಸಾಕ್ಷಿಯಿಂದ ಈ ಸಂಭ್ರಮ ಸಂತೋಷವನ್ನು ಆಚರಣೆ ಮಾಡಬೇಕು. ಭಾರತ ದೇಶಕ್ಕೆ ಸ್ವಾತಂತ್ರ ತರುವಲ್ಲಿ ಸಾಕಷ್ಟು ಭಾರತ ದೇಶದ ನಾಯಕ ಮತ್ತು ಜನರ ತ್ಯಾಗ ಬಲಿದಾನ ಅಡಕವಾಗಿದೆ. ಭಾರತ ದೇಶಕ್ಕೆ ಸ್ವಾತಂತ್ರ ಬಂದ 76 ವರ್ಷದಲ್ಲಿ ಅನೇಕ ಅಭಿವೃದ್ಧಿ ಮೈಲುಗಳನ್ನು ದೇಶ ಕಂಡಿದೆ. ನಮ್ಮ ಭಾರತ ದೇಶವು ಆರ್ಥಿಕವಾಗಿ, ಸಾಮಾಜಿಕವಾಗಿ, ಶೈಕ್ಷಣಿಕವಾಗಿ ಅಭಿವೃದ್ಧಿಯನ್ನು ನೋಡುತ್ತಾ ಬಂದಿದ್ದೇವೆ. ಅನಕ್ಷರತೆ, ನಿರುದ್ಯೋಗ, ಭ್ರಷ್ಟಾಚಾರ, ಅತ್ಯಾಚಾರ, ಉಗ್ರ ವಾದ ನೆಕ್ಸ ಲೈಟ್ ತೊಲಗಿಸಿ ಸ್ವಾವಲಂಬನೆ ಜೀವನ ಸಾಗಿಸಲು ಇಂದಿನ ಭವ್ಯ ಭಾರತದಲ್ಲಿ ಸಹಕಾರಿಯಾಗುತ್ತದೆ. ಮುಂದಿನ ದಿನಗಳಲ್ಲಿ ವಿಶ್ವದಲ್ಲಿಯೇ ರಾಜಕೀಯವಾಗಿ ಆರ್ಥಿಕವಾಗಿ, ಶೈಕ್ಷಣಿಕವಾಗಿ ಅಭಿವೃದ್ಧಿ ಹೊಂದಿದ ದೇಶ ಆಗುವುದರಲ್ಲಿ ಸಂಶಯವಿಲ್ಲ ಎಂದು ತಮ್ಮ ದೇಶಾಭಿಮಾನ ವ್ಯಕ್ತ ಪಡಿಸಿದರು.

ಕಾರ್ಯಕ್ರಮಕ್ಕೆ ವಿವಿಧ ಶಾಲೆಗಳಿಂದ ಆಗಮಿಸಿದ ವಿದ್ಯಾರ್ಥಿ ವಿದ್ಯಾರ್ಥಿನಿಯರಿಂದ ವಿವಿಧ ಸಾಂಸ್ಕೃತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗಿತ್ತು. ಎಲ್ಲಾ ಶಾಲೆಗಳಿಂದ ದೇಶ ಭಕ್ತಿ ಸಾರುವ ನೃತ್ಯಗಳನ್ನು ಹಾಗೂ ಹೆಣ್ಣುಮಕ್ಕಳು ಅಬಲೆ ಅಲ್ಲ ಸಬಲೆ ಎನ್ನುವ ಸಾರಾಂಶ ನೀಡಿವ ನೃತ್ಯಗಳನ್ನು ಮಾಡಿಸಿ ಕಾರ್ಯಕ್ರಮಕ್ಕೆ ಮೆರುಗು ನೀಡಿದರು.

ಕಾರ್ಯಕ್ರಮದಲ್ಲಿ ಪ್ರಭಾರ ಇಓ ಗಣೇಶ ಹೆಚ್, ಆರಕ್ಷಕ ವೃತ ನೀರಿಕ್ಷಕರು ವಸಂತ ವಿ ಅಸೋಡೆ, ಬಿಇಓ ಕೆ ತಿಪ್ಪೇಸ್ವಾಮಿ, ಪಶು ಇಲಾಖೆ ಅಧಿಕಾರಿ ಡಾ ರಂಗಪ್ಪ, ಅರೋಗ್ಯ ಇಲಾಖೆ ಅಧಿಕಾರಿಗಳು ಮಧುಕುಮಾರ್, ಪ ಪ ಮುಖ್ಯ ಅಧಿಕಾರಿಗಳು ಲೀಲಾವತಿ, ಸಮಾಜ ಕಲ್ಯಾಣ ಇಲಾಖೆ ಅಧಿಕಾರಿ ಟಿ ಎನ್ ಮಾಲತಿ, ಪದವಿ ಪೂರ್ವ ಕಾಲೇಜ್ ಪ್ರಾಚಾರ್ಯರು ಗೋವಿಂದಪ್ಪ, ಕೃಷಿ ಇಲಾಖೆ ಅಧಿಕಾರಿಗಳು ಉಮೇಶ್, ಬ್ಲಾಕ್ ಕಾಂಗ್ರೇಸ್ ಅಧ್ಯಕ್ಷರು ಅಬ್ದುಲ್ ಕಲೀಮ್ ಉಲ್ಲಾ, ಅಬ್ದುಲ್ ಸುಭಾನ್ ಸಾಬ್, ಪಾಂಡುರಂಗಪ್ಪ, ಪಟೇಲ್ ಜಿ ಪಾಪನಾಯಕ, ಪ್ರಥಮ ದರ್ಜೆ ಕಾಲೇಜ್ ಪ್ರಾಚಾರ್ಯರು ಬೊರಯ್ಯ, ಪಪ ಉಪಾಧ್ಯಕ್ಷರು ಮಂಜಣ್ಣ, ಸದಸ್ಯರು ಎಸ್ ಖಾದರ್, ಅಬ್ದುಲ್ ವಾಹಿದ್ ದೇವಯ್ಯ ಸೇರಿ ಮುಖಂಡರು ಉಪಸ್ಥಿತರಿದ್ದರು.

# ಮಡಿವಾಳ ಸಮಾಜಕ್ಕೆ ಎಸ್ಸಿ ಮೀಸಲಾತಿ ನೀಡಲು ರಾಜಕಾರಣಿ ಶ್ರಮಿಸಬೇಕು



**ಚಳ್ಳಕೆರೆ :** ಮಡಿವಾಳ ಸಮಾಜಕ್ಕೆ ಎಸ್ಸಿ ಮೀಸಲಾತಿ ನೀಡಿ ರಾಜಕೀಯ, ಶೈಕ್ಷಣಿಕ, ಸಾಮಾಜಿಕ ಸ್ಥಾನಮಾನ ದೊರಕಿಸಿಕೊಡುವ ನಿಟ್ಟಿನಲ್ಲಿ ರಾಜಕಾರಣಿಗಳು ಶ್ರಮಿಸಬೇಕು ಎಂದು ಚಿತ್ರದುರ್ಗ ಜಗದ್ಗುರು ಶ್ರೀಮಾಚಿದೇವ ಮಹಾಸಂಸ್ಥಾನ ಮಠದ ಮಡಿವಾಳ ಡಾ.ಬಸವ ಮಾಚಿದೇವ ಮಹಾಸ್ವಾಮಿ ಹೇಳಿದರು.

ಅವರು ನಗರದ ಛೇಂಬರ್ ಆಫ್ ಕಾಮರ್ಸ್ ಕಲ್ಯಾಣ ಮಂಟಪದಲ್ಲಿ ಮಡಿವಾಳ ಸಮಾಜ ಆಯೋಜಿಸಿದ್ದ ಶ್ರಾವಣ ಮಾಸದ ಮನ, ಮನೆ ಮಾಚಿದೇವ ಕಾರ್ಯಕ್ರಮದ ದಿವ್ಯಸಾನಿಧ್ಯ ವಹಿಸಿ ಮಾತನಾಡಿದರು. ಮಡಿವಾಳ ಜನಾಂಗ ಸಮಾಜದಲ್ಲಿ ಉನ್ನತ ಸ್ಥಾನ ಪಡೆಯುವ ನಿಟ್ಟಿನಲ್ಲಿ ಕಳೆದ ಹಲವಾರು ವರ್ಷಗಳಿಂದ ಪ್ರಯತ್ನಿಸುತ್ತಿದ್ದರೂ ಯಾವುದೇ ಪ್ರಯೋಜನವಾಗಿಲ್ಲ, ರಾಷ್ಟದ 18 ರಾಜ್ಯಗಳಲ್ಲಿ ನಮ್ಮ ಸಮಾಜಕ್ಕೆ ಎಸ್ಸಿ ಮೀಸಲಾತಿ ನೀಡಲಾಗಿದೆ. ಅದರೆ, ನಮ್ಮ ರಾಜ್ಯದಲ್ಲಿ ಮಾತ್ರ ಇನ್ನೂ ಹಿಂದುಳಿದ ವರ್ಗದಲ್ಲೆ ಇರಿಸಿ ಅನ್ಯಾಯ ವೆಸಗಲಾಗುತ್ತಿದೆ. ಸಮಾಜಕ್ಕೆಬೇಕಿರುವ ಮೀಸಲಾತಿ ನೀಡುವ ಮೂಲಕ ಸಮಾಜದ ಮುಖ್ಯವಾಹಿನಿಗೆ ತರುವ ಕೆಲಸ ಅಧಿಕಾರಕ್ಕೆ ಬಂದ ಯಾರೊಬ್ಬ ರಾಜಕಾರಣಿಯೂ ಮಾಡುತ್ತಿಲ್ಲ.

ಸ್ಥಳೀಯ ಶಾಸಕ ಟಿ.ರಘುಮೂರ್ತಿ ಸಮಾಜದ ಏಳಿಗಾಗಿ ಹಲವಾರು ಸೌಲಭ್ಯಗಳನ್ನು ನೀಡಿದ್ದಾರೆ. ಅದರಂತೆ ಮಡಿಕಟ್ಟೆ, ಸಮುದಾಯ ಭವನ, ವಿದ್ಯಾರ್ಥಿಗಳಿಗಾಗಿ ಹಾಸ್ಟೆಲ್ ನಿರ್ಮಿಸಲು ಅನುದಾನ ನೀಡಬೇಕಿದೆ. ಹಲವಾರು ಸಮುದಾಯಗಳ ಸಂಕಷ್ಟಕ್ಕೆ ಸ್ಪಂದಿಸಿರುವ ಶಾಸಕರು ನಮ್ಮ ಸಮಾಜದ ಅಭಿವೃದ್ಧಿಗೂ ಮುಂದಾಗಬೇಕು.

ವಡೇರಹಳ್ಳಿ ಹನುಮಂತರಾಯಸ್ವಾಮೀಜಿ ಮಾತನಾಡಿ, ಮಡಿವಾಳ ಸಮಾಜ ಸೌಮ್ಯ ಸಮಾಜ, ರಾಜ್ಯದಲ್ಲಿ ಬಹಳಷ್ಟು ಜನಸಂಖ್ಯೆ ಹೊಂದಿದ್ದರೂ ಸೂಕ್ತ ರಾಜಕೀಯ ಪ್ರಾಶಸ್ತ್ಯವಿಲ್ಲದೆ ಹಿಂದೆ ಉಳಿದಿದೆ. ಸಮಾಜವನ್ನು ಬೆಳೆಸುವ ಇಚ್ಛಾಶಕ್ತಿ ರಾಜಕಾರಣಿಗಳು ಮತ್ತು ಸಮಾಜದ ಪ್ರಜ್ಞಾವಂತರಲ್ಲಿ ಬರಬೇಕಿದೆ. 12ನೇ ಶತಮಾನದಲ್ಲೇ ವಚನಗಳನ್ನು ರಕ್ಷಣೆ ಮಾಡಿದ ಮಡಿವಾಳ ಮಾಚಿದೇವರ ಕುಲದಲ್ಲಿ ಜನಿಸಿದ ತಾವೆಲ್ಲರೂ ಪುಣ್ಯವಂತರು ಎಂದರು.

ಶಾಸಕ ಟಿ.ರಘುಮೂರ್ತಿ ಮಾತನಾಡಿ, ಕಳೆದ ಹಲವಾರು ವರ್ಷಗಳಿಂದ ಮಡಿವಾಳ ಸಮಾಜ ನನ್ನೊಂದಿಗೆ ಇದೆ. ಎಲ್ಲಾ ಸಮುದಾಯಗಳಂತೆ ಮಡಿವಾಳರೂ ಸಹ ನನ್ನ ಗೆಲುವಿಗೆ ಶ್ರಮಿಸಿದ್ದಾರೆ. ಹ್ಯಾಟ್ರಿಕ್ ಸಾಧನೆ ಮಾಡಲು ನಿಮ್ಮಪಾತ್ರವೂ ಬಹಳಷ್ಟು ಇದೆ. ನಿಮ್ಮ ಬೇಡಿಕೆಗಳನ್ನು ಸರ್ಕಾರದೊಂದಿಗೆ ಚರ್ಚೆ ನಡೆಸಿ ಸೂಕ್ತ ಪ್ರಾತಿನಿಧಿ ನೀಡಲು ನಾನು ಸದಾ ಮುಂದು. ಬಸವಣ್ಣನವರ ಕಾಲಮಾನದಿಂದಲ್ಲೂ ಕೊಳೆ ಬಟ್ಟೆ ತೊಳೆದು ಶುಭ್ರ ಸಮಾಜ ನಿರ್ಮಾಣ ಮಾಡುತ್ತಿರುವ ನಿಮ್ಮ ಸೇವೆ ಶ್ಲಾಘನೀಯ. ಕಾರ್ಯಕ್ರಮದಲ್ಲಿ ಉಪ್ಪಾರಹಟ್ಟಿಯ ಶ್ರೀಕರಿಬಸವೇಶ್ವರ ಸ್ವಾಮೀಜಿ, ಡಿವೈಎಸ್ಪಿ ರಾಜಣ್ಣ, ಜಿಲ್ಲಾಧ್ಯಕ್ಷ ರಾಮಜ್ಜ, ಕಾರ್ಯದರ್ಶಿ ಕರವೇಮಂಜುನಾಥ, ತಾಲ್ಲೂಕು ಅಧ್ಯಕ್ಷ ಎನ್.ಮಂಜುನಾಥ, ಉಪಾಧ್ಯಕ್ಷ ಪುಟ್ಟಲಿಂಗಪ್ಪ, ಕಾರ್ಯದರ್ಶಿ ಕುಶಾಲಪ್ಪ, ಗೌರವಾಧ್ಯಕ್ಷ ನಾಗರಾಜು, ಖಜಾಂಚಿ ಆರ್ಟ್ಸನ್ಸ್ ಪ್ರಕಾಶ್, ವಿಜಯಣ್ಣ, ಓಂಕಾರಪ್ಪ, ಪಗಡಲಬಂಡೆ ನಾಗೇಂದ್ರಪ್ಪ, ಪರಶುರಾಮಪುರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶಶಿಧರ ಮುಂತಾದವರು ಉಪಸ್ಥಿತರಿದ್ದರು.

# ಚರ್ಮದ ಆರೋಗ್ಯಕ್ಕೆ ಈ ಟಿಪ್ಸ್ ಫಾಲೋ ಮಾಡಿ

ಆರೋಗ್ಯ ಕಾರ್ನರ್

ನಮ್ಮ ಜನ ಆರೋಗ್ಯ ವಾರ್ತೆ:ನಮ್ಮ ಚರ್ಮದ ಆರೋಗ್ಯದ ಮೇಲೆ ಹತ್ತು ಹಲವು ಅಂಶಗಳು ಪರಿಣಾಮ ಬೀರುವುದರಿಂದ ಚರ್ಮ ಹಲವು ಸಮಸ್ಯೆಗಳನ್ನು ಕಾಲಕಾಲಕ್ಕೆ ಎದುರಿಸಬೇಕಾಗುತ್ತದೆ. ಮೇಲ್ನೋಟಕ್ಕೆ ವಿಷಯ ತೀರಾ ಸಣ್ಣದೆನಿಸಿದರೂ, ಬೇರೆ ಅನಾರೋಗ್ಯದ ಸಮಸ್ಯೆಗಳಂತೆ ಇದು ತೀರಾ ತಲೆಕೆಡಿಸುವಷ್ಟು ಗಂಭೀರವಲ್ಲದಿದ್ದರೂ ಮಾನಸಿಕವಾಗಿ, ನಮ್ಮ ಒಟ್ಟು ಮನಸ್ಥಿತಿಯ ಮೇಲೆ ಬೀರುವ ಪರಿಣಾಮ ದೊಡ್ಡದು. ಚರ್ಮದ ಸೌಂದರ್ಯ ಅಥವಾ ಆರೋಗ್ಯ ಬಹುತೇಕರಿಗೆ ಆತ್ಮವಿಶ್ವಾಸ ಹಾಗೂ ಒಟ್ಟು ವ್ಯಕ್ತಿತ್ವದ ಮೇಲೆ ಪರಿಣಾಮ ಬೀರುವುದರಿಂದ ಇದು ಬಹಳ ಮುಖ್ಯವೂ ಆಗುತ್ತದೆ. ಚರ್ಮದ ಆರೋಗ್ಯದ ಮೇಲೆ ಪರಿಣಾಮ ಬೀರುವ ಅಂಶಗಳ ಪೈಕಿ ಬಹುಮುಖ್ಯವಾದುದು ನಾವು ಸೇವಿಸುವ ಆಹಾರ. ಇಂದು ಬದಲಾದ ಆಹಾರ ಪದ್ಧತಿ ಸೇರಿದಂತೆ ನಾನಾ ಕಾರಣಗಳು ನಮ್ಮ ಚರ್ಮದ ಆರೋಗ್ಯ ಹದಗೆಡಲು ಕಾರಣವಾಗುತ್ತದೆ. ಕಾರ್ಬೋನೇಟೆಡ್ ಪೇಯಗಳ ಸೇವನೆಯೂ ನಮ್ಮ ಚರ್ಮದ ಆರೋಗ್ಯದ ಮೇಲೆ ಸಾಕಷ್ಟು ಕೆಟ್ಟ ಪರಿಣಾಮ ಬೀರುತ್ತದೆ. ಚರ್ಮ ಆರೋಗ್ಯದಿಂದ ಕಂಗೊಳಿಸಲು ಇವುಗಳಿಂದ ದೂರವಿರುವುದೂ ಮುಖ್ಯವಾಗುತ್ತದೆ. ಹಾಗಾದರೆ ಬನ್ನಿ, ಚರ್ಮದ ಮೇಲೆ ಕಾಳಜಿ ಇರುವ ಮಂದಿ ಯಾಕೆ ಕಾರ್ಬೋನೇಟೆಡ್ ಪೇಯಗಳನ್ನು ಕುಡಿಯುವುದನ್ನು ಕಡಿಮೆ ಮಾಡಬೇಕು ಎಂಬುದಕ್ಕೆ ಕಾರಣಗಳನ್ನು ನೋಡೋಣ.



**ಅತಿ ಹೆಚ್ಚು ಸಕ್ಕರೆ ಇರುತ್ತದೆ:** ಫ್ಲೇವರ್ಡ್ ಡ್ರಿಂಕ್‌ಗಳು ಹಾಗೂ ಕಾರ್ಬೋನೇಟೆಡ್ ಪೇಯಗಳಲ್ಲಿ ಅತ್ಯಂತ ಹೆಚ್ಚು ಸಕ್ಕರೆ ಇರುವುದರಿಂದ ಇದು ಚರ್ಮಕ್ಕೆ ಖಂಡಿತಾ ಒಳ್ಳೇಯದು ಮಾಡುವುದಿಲ್ಲ. ಹೆಚ್ಚು ಸಕ್ಕರೆಯ ಪ್ರಮಾಣ ಚರ್ಮದ ಒಟ್ಟಾರೆ ಲುಕ್ ಮೇಲೆ ಅಡ್ಡ ಪರಿಣಾಮಗಳನ್ನು ಬೀರುವುದರಿಂದ ಚರ್ಮ ಊದಿಕೊಂಡಂತೆ, ಹಾಗೂ ಪೇಲವವಾಗಿ ಕಾಣುವಂತೆ ಮಾಡುತ್ತದೆ. ಹಾಗಾಗಿ ದಿನವೂ ಕೋಲಾ, ಸೋಡಾದಂತಹ ಪೇಯಗಳಿಗೆ ಮೊರೆ ಹೋಗುವ ಮಂದಿ ಮತ್ತೊಮ್ಮೆ ಯೋಚಿಸಿ.

**ಇದು ಚರ್ಮವನ್ನು ಒಣಗಿಸುತ್ತದೆ:** ಚರ್ಮದ ಆರೋಗ್ಯದಲ್ಲಿ ಬಹಳ ಮುಖ್ಯವಾದದ್ದು ಎಂದರೆ ಚರ್ಮಕ್ಕೆ ಸಿಗಬೇಕಾದ ನೀರಿನಂಶ ಸಿಗಲೇಬೇಕು. ಸಿಗದಿದ್ದರೆ ಹಲವು ಸಮಸ್ಯೆಗಳು ಚರ್ಮದ ಮೂಲಕ ಕಾಣತೊಡಗುತ್ತದೆ. ಚರ್ಮ ಒಣಗಿದಂತಾಗುವುದೂ ಕೂಡಾ ಚರ್ಮ ಅನುಭವಿಸುವ ನೀರಿನ ಕೊರತೆಯೇ ಆಗಿದೆ. ಇದರಲ್ಲಿರುವ ಸಕ್ಕರೆ ಹಾಗೂ ಕೆಫಿನ್ ಅಂಶ ಚರ್ಮವನ್ನು ಒಣಗಿಸುವುದರಿಂದ ಚರ್ಮ ನಿಸ್ತೇಜವಾಗಿ, ಕಳಾಹೀನವಾಗಿ ಕಾಣಲಾರಂಭಿಸುತ್ತದೆ.

**ಮೊಡವೆಗಳುಂಟಾಗಬಹುದು:** ಕಾರ್ಬೋನೇಟೆಡ್ ಪೇಯಗಳು ಹಾರ್ಮೋನಿನ ವೈಪರೀತ್ಯಕ್ಕೂ ಕಾರಣವಾಗುವುದರಿಂದ ಚರ್ಮದಲ್ಲಿ ಮೊಡವೆಗಳು ಏಳಲೂ ಕಾರಣವಾಗಬಹುದು. ಹಾರ್ಮೋನ್ ಏರುಪೇರು ಮೊಡವೆಗೆ ಇರುವ ಬಹುದೊಡ್ಡ ಕಾರಣಗಳಲ್ಲಿ ಒಂದು. ಇಂತಹ ಪೇಯಗಳು ಸೆಬಮ್ ಉತ್ಪತ್ತಿಯನ್ನು ಪ್ರೇರೇಪಿಸುವ ಮೂಲಕವೂ ಮೊಡವೆ ಹೆಚ್ಚಲು ಕಾರಣೀಭೂತವಾಗುತ್ತದೆ. ಇದರಲ್ಲಿರುವ ಕೆಫಿನ್ ಕಾರಣದಿಂದಲೂ ಮೊಡವೆ ಹೆಚ್ಚಾಗಬಹುದು

**ಚರ್ಮದಲ್ಲಿ ಸುಕ್ಕು ಬಹುಬೇಗನೆ ಆಗಬಹುದು:** ವಯಸ್ಸಾಗುತ್ತಿದ್ದಂತೆ ಚರ್ಮ ಸುಕ್ಕಾಗುವುದು ಸಹಜ. ಆದರೆ, ಕಾರ್ಬೋನೇಟೆಡ್ ಪೇಯಗಳ ಸೇವನೆ ಹೆಚ್ಚಾದರೆ ಚರ್ಮದ ಸುಕ್ಕಾಗುವಿಕೆ ಪ್ರಕ್ರಿಯೆ ಬೇಗನೆ ಆಗಬಹುದು. ಪರಿಣಾಮ ಚರ್ಮಕ್ಕೆ ಬಿಗಿತನ ಕಡಿಮೆಯಾಗಿ ಸಣ್ಣ ವಯಸ್ಸಿನಲ್ಲಿಯೇ ವಯಸ್ಸಾದವರಂತೆ ಕಾಣಬಹುದು. ಹಾಗಾಘಿ ನಿಮಗೆ ಸುಕ್ಕುರಹಿತ ನುಣುಪಾದ ಚರ್ಮ ಬೇಕಿದ್ದರೆ, ಇಂತಹ ಡ್ರಿಂಕ್‌ಗಳಿಂದ ದೂರವಿರಿ.

**ಜೀರ್ಣಕ್ರಿಯೆಯ ಮೇಲೆ ಪರಿಣಾಮ ಬೀರುತ್ತದೆ:** ಇಂತಹ ಪೇಯಗಳ ಸೇವನೆ ಒಟ್ಟಾರೆ ಜೀರ್ಣಕ್ರಿಯೆಯ ಮೇಲೆ ಪರಿಣಾಮ ಬೀರುತ್ತದೆ. ಇದರಿಂದ ದೇಹದಲ್ಲಿರುವ ವಿಷಕಾರಕಗಳು ಅಥವಾ ಕಲ್ಮಶಗಳು ಹೊರಹೋಗದೆ, ಅವುಗಳ ಪರಿಣಾಮ ಚರ್ಮದ ಆರೋಗ್ಯವೂ ಹದಗೆಡುತ್ತದೆ. ಪೋಷಕಾಂಶಗಳ ಹೀರಿಕೆಯೂ ಸರಿಯಾಗಿ ಆಗದು. ಇದರಿಂದಾಗಿ ಮೊಡವೆ, ಕಜ್ಜಿ, ಕಪ್ಪು ಕಲೆಗಳಂತಹ ಸಮಸ್ಯೆಗಳು, ಸುಕ್ಕು, ಕುಳಿಗಳು ಇತ್ಯಾದಿಗಳೂ ಕೂಡಾ ಕಾಣಿಸಿಕೊಳ್ಳುತ್ತವೆ.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T